ವಿಜಯಪುರ | ಸಂಪುಟ 02 | ಸಂಚಿಕೆ 80 | ಪುಟ 4 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ


ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಗುರುವಾರ, ಮೇ 16, 2024

“ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ಆಡಳಿತಕ್ಕೆ ಬಂದು ಒಂದು ವರ್ಷ ಪೂರೈಸುತ್ತಿದೆ. ಈ ಸಂದರ್ಭದಲ್ಲಿ ಸರ್ಕಾರ ತನ್ನ ದುರಾಡಳಿತದ ಮೂಲಕ ಶಿಕ್ಷಣ ಕ್ಷೇತ್ರವನ್ನು ಹಾಳುಗೆಡವಿದೆ. ಶಿಕ್ಷಣ ಸಚಿವ ಮಧು ಬಂಗಾರಪ್ಪ ಈ ಇಲಾಖೆಯನ್ನು ನಿರ್ವಹಿಸುವಲ್ಲಿ ವಿಫಲರಾಗಿದ್ದಾರೆ.”



– ಅರುಣ್ ಶಹಾಪೂರ
ವಿಧಾನಪರಿಷತ್ ಮಾಜಿ ಸದಸ್ಯರು

**ಪ್ರಜ್ವಲ್ ರೇವಣ್ಣ ಸೆಕ್ಸ್ ವಿಡಿಯೋ ಪ್ರಕರಣ । 16 ಬೇಡಿಕೆಗಳನ್ನೊಳಗೊಂಡ ಬಹಿರಂಗ ಪತ್ರ । ಕಾಲಮಿತಿಯಲ್ಲಿ ಎಸ್‌ಐಟಿ ತನಿಖೆಗೆ ಆಗ್ರಹ**

# ಸಾಹಿತಿಗಳು, ಬರಹಗಾರರಿಂದ ಸಿಎಂ ಗೆ ಬಹಿರಂಗ ಪತ್ರ!

ಬೆಂಗಳೂರು: ಹಾಸನ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅವರ ರಾಸಲೀಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಹಿತಿಗಳು, ಬರಹಗಾರರು, ಮಹಿಳಾ ಸಂಘಟನೆಗಳ ಮುಖಂಡರು ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಬಹಿರಂಗ ಪತ್ರವೊಂದನ್ನು ಬರೆದಿದ್ದಾರೆ.



ಪ್ರಜ್ವಲ್ ರೇವಣ್ಣ ಎಲ್ಲಿದ್ದರೂ ಪತ್ತೆ ಮಾಡಿ ಬಂಧಿಸಬೇಕು. ಕಾಲಮಿತಿಯಲ್ಲಿ ಎಸ್‌ಐಟಿ ತನಿಖೆ ನಡೆಯಬೇಕು ಎನ್ನುವುದು ಸೇರಿದಂತೆ 16 ಬೇಡಿಕೆಗಳನ್ನೊಳಗೊಂಡ ಬಹಿರಂಗ ಪತ್ರಕ್ಕೆ ಹಿರಿಯ ಲೇಖಕರಾದ ಡಾ. ವಿಜಯಾ, ಸಾಹಿತಿ ಡಾ.ಜಿ ರಾಮಕೃಷ್ಣ, ವಸುಂಧರಾ ಭೂಪತಿ, ಮೀನಾಕ್ಷಿ ಬಾಳಿ, ಕೆ ನೀಲಾ, ಕೆ.ಎಸ್ ವಿಮಲಾ, ಕುಂ ವೀರಭದ್ರಪ್ಪ, ಮುಜಫರ್ ಅಸ್ಸಾದಿ ಸೇರಿದಂತೆ ಒಟ್ಟು 107 ಮಂದಿ ಸಹಿ ಮಾಡಿದ್ದು, 'ಪಜ್ಞಾವಂತ ನಾಗರಿಕರ ಬಹಿರಂಗ ಪತ್ರ' ಎಂದು ಹೆಸರಿಸಲಾಗಿದೆ.

ಪ್ರಜ್ವಲ್ ರೇವಣ್ಣ ಪ್ರಕರಣವು ಅತ್ಯಂತ ಹೇಯವಾಗಿದ್ದು, ನಾಗರೀಕ ಸಮಾಜ ತಲೆತಗ್ಗಿಸುವಂತಹುದಾಗಿದೆ. 2900 ವಿಡಿಯೋ ಮತ್ತು ಫೋಟೋಗಳ ದಾಖಲೆ ಇಟ್ಟುಕೊಂಡಿರುವುದು, ಸಂತ್ರಸ್ತರು ದೂರು ನೀಡದಂತೆ ಬೆದರಿಸುವುದು, ಅಪಹರಿಸುವುದು, ಅನೇಕ ವರ್ಷಗಳಿಂದ ನಡೆದುಕೊಂಡು ಬಂದಿರುವ ಹಗರಣವನ್ನು ಮಾಹಿತಿ ಇರುವ ಯಾರೊಬ್ಬರೂ ಕಾನೂನು ಪಾಲಕರಿಗೆ ತಿಳಿಸದೆ ಮುಚ್ಚಿಟ್ಟಿರುವುದು ಘೋರ ಅಪರಾಧ ಎಂದು ಹೇಳಿದ್ದಾರೆ.

ಹಗರಣವನ್ನು ರಾಜಕೀಯ ನಾಯಕರು ತಮ್ಮ ಹಿತಾಸಕ್ತಿ ಮತ್ತು ಚುನಾವಣೆಗೆ ಬಳಸುತ್ತಿರುವುದು ಮತ್ತಷ್ಟು ಆಘಾತಕಾರಿಯಾಗಿದೆ. ರಾಜಕೀಯ ಶಕ್ತಿಗಳ ಬೇಜವಾಬ್ದಾರಿ ನಡುವಳಿಕೆಯು ಮೂಲ ಅಪರಾಧ ಮತ್ತು ಅದರಿಂದ ಆಗಲಿರುವ ಪರಿಣಾಮಗಳನ್ನು ಗೌಣ ಮಾಡುತ್ತಿದೆ ಎಂದಿದ್ದಾರೆ.





ಪ್ರಜ್ವಲ್ ರೇವಣ್ಣನ ತಾತ, ತಂದೆ, ತಾಯಿ, ಅಣ್ಣ, ಚಿಕ್ಕಪ್ಪ, ಚಿಕ್ಕಮ್ಮ ಪ್ರಜಾಪ್ರಭುತ್ವದ ಎಲ್ಲ ಹುದ್ದೆಗಳನ್ನು, ಸರ್ಕಾರದ ಎಲ್ಲ ಸವಲತ್ತುಗಳನ್ನು ಬಳಸಿಕೊಳ್ಳುತ್ತಾ ಬಂದಿದ್ದಾರೆ. ಕುಟುಂಬಸ್ಥರು ಪ್ರಜಾಪ್ರಭುತ್ವದ ಮುಸುಕಿನೊಳಗೆ, ಪ್ರಜಾಪ್ರತಿನಿಧಿಗಳೆಂಬ ಧಿರಿಸು ಧರಿಸಿ ನಡೆಸಿರುವ ಪಾಳೇಗಾರಿಕೆಯ ಆಡಳಿತ ನಡೆಸುತ್ತಾ ಬಂದಿದ್ದಾರೆ.

ಈ ಹಗರಣ ಬಯಲಾದರೂ ಹಾಸನ ಚುನಾವಣೆ ಸ್ಥಗಿತಗೊಳಿಸದೆ, ಆರೋಪಿಯನ್ನು ಚುನಾವಣೆಗೆ ಸ್ಪರ್ಧೆ ಮಾಡಲು ಬಿಟ್ಟಿರುವುದು ಪ್ರಜಾಪ್ರಭುತ್ವಕ್ಕೆ ಮಾಡಿದ ಅಪಚಾರ. ಹಗರಣ ಬಯಲಾಗಿ ಏ.22 ರಿಂದ 26ರ ವರೆಗೆ ಆರೋಪಿಯನ್ನು ಬಂಧಿಸಿಲ್ಲ. ಇದು ಮಹಿಳೆಯರ ಸುರಕ್ಷತೆ ಬಗ್ಗೆ ಪ್ರಶ್ನೆ ಮೂಡಿಸಿದೆ ಎಂದಿದ್ದಾರೆ.

## ಸಾಹಿತಿಗಳು, ಬರಹಗಾರರ 16 ಬೇಡಿಕೆಗಳು


1) ಪ್ರಜ್ವಲ್ ರೇವಣ್ಣ ಎಲ್ಲಿದ್ದರೂ ಪತ್ತೆ ಮಾಡಿ ಬಂಧಿಸಬೇಕು.
2) ಸಂತ್ರಸ್ತ ಮಹಿಳೆಯರಿಗೆ ಧೈರ್ಯ ತುಂಬಿ, ದೂರು ನೀಡುವ ವಾತಾವರಣ ನಿರ್ಮಾಣ ಮಾಡಬೇಕು.
3) ಹಗರಣದ ಆರೋಪ– ಪ್ರತ್ಯಾರೋಪದಲ್ಲಿ ತೊಡಗಿರುವ ರಾಜಕೀಯ ನಾಯಕರ ನಡವಳಿಕೆಗೆ ಕಡಿವಾಣ ಹಾಕಬೇಕು.
4) ಎಸ್‌ಐಟಿ ತನಿಖೆ ಕಾಲಮಿತಿಯಲ್ಲಿ ನಡೆಯಬೇಕು.
5) ಲೈಂಗಿಕ ಕೃತ್ಯ ಚಿತ್ರೀಕರಣದಲ್ಲಿ ಭಾಗಿಯಾದವರನ್ನು ಪತ್ತೆ ಮಾಡಿ ಮೊಕದ್ದಮೆ ಹೂಡಬೇಕು.
6) ಕಾರು ಚಾಲಕ ಕಾರ್ತಿಕ್‌ನನ್ನು ಕೂಡಲೇ ಬಂಧಿಸಬೇಕು.
7) ವಿಡಿಯೋ ತಮ್ಮ ಬಳಿ ಇದೆ ಎಂದ ಹೇಳಿದ ರಾಜಕೀಯ ನಾಯಕ ಮತ್ತು ಕಾರು ಚಾಲಕ ಕಾರ್ತಿಕ್ ಗೌಡ ವಿರುದ್ಧ ಸಂಚು ರೂಪಿಸಿದ್ದಕ್ಕೆ ಸೂಕ್ತ ಕಾನೂನುಗಳ ಅಡಿಯಲ್ಲಿ ಮೊಕದ್ದಮೆ ಹೂಡಬೇಕು.
8) ವಿಡಿಯೋಗಳನ್ನು ಹಂಚಿದವರ ವಿರುದ್ಧ ಮಾನವ ಹಕ್ಕುಗಳಿಗೆ ಧಕ್ಕೆ, ಎಲೆಕ್ಷನ್ ಸ್ಯಾಬೊಟೇಜ್ ಮಾಡಲು ಸಂಚು ಮಾಡಿರುವ ಆರೋಪಗಳ ಮೇಲೆ ಕೇಸ್ ದಾಖಲಿಸಬೇಕು.
9) ವಿಡಿಯೋ ಕುರಿತು ಮಾಹಿತಿ ಇದ್ದರೂ ಪೊಲೀಸರಿಗೆ ಮಾಹಿತಿ ನೀಡಿಲ್ಲದ ಕಾರಣ ಅವರನ್ನು ಸಂಚಿನ ಭಾಗ ಎಂದು ಪರಿಗಣಿಸಬೇಕು.
10) ವಿಡಿಯೋ ಹಳೆಯದು ಎಂದು ಎಚ್‌ಡಿ ರೇವಣ್ಣ ಹೇಳಿದ್ದಾರೆ. ಅಷ್ಟು ವರ್ಷ ನಡೆಯುತ್ತಿರುವ ಲೈಂಗಿಕ ವಿಕೃತಿ ಮುಂದುವರೆಯಲು ಬಿಟ್ಟಿರುವ ಕುಟುಂಬ ಸದಸ್ಯರ ವಿರುದ್ಧವೂ ಮೊಕದ್ಧಮೆ ಹೂಡಬೇಕು.
11) ಆರೋಪಿ ದೇಶ ಬಿಟ್ಟು ಹೋಗಲು ಸಹಕರಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಆಗಬೇಕು.
12) ಪ್ರಜ್ವಲ್ ರೇವಣ್ಣ ಹುಳುಕುಗಳನ್ನು ಮುಚ್ಚಿಟ್ಟುಕೊಳ್ಳಲು ಪಡೆದ ಈ ತಡೆಯಾಜ್ಞೆಯಿಂದ ಜನರ ಹಕ್ಕಿನ ಉಲ್ಲಂಘನೆಯಾಗಿದ್ದು ಜನರ ಹಕ್ಕುಗಳ ಸಂರಕ್ಷಕನಾಗಿರುವ (ಕಸ್ಟೋಡಿಯನ್) ರಾಜ್ಯ ಸರ್ಕಾರವು ಈ ಕುರಿತು ಮೊಕದ್ದಮೆ ದಾಖಲಿಸಬೇಕು.
13) ಹೆಚ್ ಡಿ ರೇವಣ್ಣ, ಪ್ರಜ್ವಲ್ ರೇವಣ್ಣ ಅವರ ಶಿಫಾರಸ್ಸಿನ ಮೇರೆಗೆ ಹಾಸನ ಜಿಲ್ಲೆಯ ವಿವಿಧ ಕಚೇರಿಗಳಲ್ಲಿ ನೇಮಕಗೊಂಡಿರುವ ಅಧಿಕಾರಿಗಳನ್ನು ಕೂಡಲೇ ವರ್ಗಾವಣೆ ಮಾಡಬೇಕು.
14) ಎಸ್‌ಐಟಿ ತನಿಖೆ ಪೂರ್ಣಗೊಳ್ಳುವವರೆಗೆ ಹೆಚ್ ಡಿ ರೇವಣ್ಣ ಅವರ ವಿಧಾನಸಭೆ ಸದಸ್ಯತ್ವವನ್ನು ತಾತ್ಕಾಲಿಕವಾಗಿ ರದ್ದುಪಡಿಸಬೇಕು.
15) ಈ ಆರೋಪಿಗಳ ನಡೆಯು ಸಂವಿಧಾನ ವಿರೋಧಿ, ಪ್ರಜಾಪ್ರಭುತ್ವ ವಿರೋಧಿ ಕೃತ್ಯವಾಗಿದೆ. ಸರ್ಕಾರಿ ಬಂಗ್ಲೆಯನ್ನು ಅಪರಾಧ ಕೃತ್ಯಕ್ಕೆ ಬಳಸಿರುವುದಕ್ಕೆ ಮೊಕದ್ದಮೆ ಹೂಡಬೇಕು.
16) ಈ ಕುಟುಂಬಕ್ಕೆ ಒದಗಿಸಲಾಗಿರುವ ಎಲ್ಲ ಸರ್ಕಾರಿ ಸವಲತ್ತುಗಳನ್ನು ಈ ಕೂಡಲೇ ಹಿಂದಕ್ಕೆ ಪಡೆಯಬೇಕು ಎಂಬ ಬೇಡಿಕೆಗಳುಳ್ಳ ಪತ್ರವನ್ನು ಬರೆದಿದ್ದಾರೆ.

### ರಾಜ ನುಡಿ

ಅಸಲಿಗಿಂತ ಬಡ್ಡಿಯ ಮೇಲೆ ಮನುಷ್ಯನಿಗೆ ಒಲವು ಹೆಚ್ಚಂತೆ. ಹಾಗೆಯೇ ಅಜ್ಜ-ಅಜ್ಜಿಗೆ ಮಕ್ಕಳಿಗಿಂತ ಮೊಮ್ಮಕ್ಕಳ ಮೇಲೆ ಪ್ರೀತಿ ಜಾಸ್ತಿ. ಪ್ರೀತಿಗೆ ಮೇಲ್ಮುಖಕ್ಕಿಂತ ಇಳಿಮುಖ ಹರಿವಿನ ಪ್ರಮಾಣ ಹೆಚ್ಚು.

–ಡಾ. ರಾಜಶೇಖರ ನಾಗೂರ

### ವಚನ ಚಿಂತನ 380



*ನಾನೊಂದು ಕಾರಣ ಮತ್ರ್ಯಕ್ಕೆ ಬಂದೆನು,*
*ಬಂದ ಬಳಲಿಕೆಯ ಪರಿಹರಿಸಲಿಕ್ಕೆ*

*ಚೆನ್ನಬಸವಣ್ಣ ಬಂದನು,*
*ಇನ್ನು ಬಾರದಂತೆ ಪ್ರಭುದೇವರು ಬಂದರು,*
*ಇದಕ್ಕೆ ಆಜ್ಞಾಕರ್ತೃ ಮಡಿವಾಳ ಮಾಚಿತಂದೆ ಬಂದನು.*
*ನಾನಿನ್ನಾರಿಗಂಜೆನು, ಬದುಕಿದೆನು*
*ಕಾಣಾ ಕೂಡಲಸಂಗಮದೇವಾ.*

ವಚನಗಳು ಅಂದಿನ ಶರಣರು ಜೀವನಚರಿತ್ರೆಯ ಕೆಲವು ಪ್ರಮುಖ ಅಂಶಗಳನ್ನು ಅಡಗಿಸಿಕೊಂಡಿರುತ್ತವೆ. ಮೇಲಿನ ವಚನ ದಲ್ಲಿ ಅಂ-ದು ಕಲ್ಯಾಣದಲ್ಲಿ ಬಸವಣ್ಣನವರು ಕೈಗೊಂಡ ನೂತನ ವೈಚಾರಿಕ ಚಿಂತನೆಗೆ ಯಾರ್ಯಾರು ಸಹಾಯ ನೀಡಿದರು ಎಂಬು ದನ್ನು ನೆನೆದಿರುವುದನ್ನು ಕಾಣಬಹುದು,ಬಸವಣ್ಣನವರು ತಮ್ಮ ಜನನದ ಮುಖ್ಯ ಉದ್ದೇಶವನ್ನು ಮೊದಲೇ ಅರಿತ್ತಿದ್ದರು ಎಂಬುದನ್ನು ವಚನದ ಪ್ರಾರಂಭದ ಸಾಲಿನಿಂದ ನಾವು ಅರಿತುಕೊಳ್ಳಬ ಹುದು (ನಾನೊಂದು ಕಾರಣ ಮತ್ರ್ಯಕ್ಕೆ ಬಂದೆನು,),ತಮ್ಮ ಕಾರ್ಯ ಸಿದ್ದಿಗೆ ಎದುರಾದ ಸಮಸ್ಯೆಗಳನ್ನು ದಿಟ್ಟತನದಿಂದ ಎದುರಿಸಿ ಮುನ್ನೆಡೆಯುವಾಗ ಉಂಟಾದ ಬಳಲಿಕೆಯನ್ನು ತುಂಬುವುದಕ್ಕಾಗಿ ಚೆನ್ನಬಸವಣ್ಣನವರು ಜೊತೆಯಾದರು ಎಂಬುದನ್ನು “ ಬಂದ ಬಳಲಿಕೆಯ ಪರಿಹರಿಸಲಿಕ್ಕೆ ಚೆನ್ನಬಸವಣ್ಣ ಬಂದನು,” ಎಂದಿದ್ದಾ ರೆ. ಬಸವಣ್ಣನವರ ಈ ನೂತನ ಚಳುವಳಿಗೆ ಆನೆಬಲ ಒದಗಿಸಿ ಕೊಟ್ಟವರು ಅಲ್ಲಮಪ್ರಭುಗಳು , ಅವರು ಕಲ್ಯಾಣದಲ್ಲಿ ಬಹಳ ದಿನಗಳವರೆಗೆ ಇರದಿದ್ದರೂ ಚಳುವಳಿಗೆ ಒಂದು ಸರಿಯಾದ ಮಾರ್ಗವನ್ನು ಕಲ್ಪಿಸಿ ಅಲ್ಲಿಂದ ನಿರ್ಗಮಿಸಿದ ಬಗೆಯನ್ನು “ ಇನ್ನು ಬಾರದಂತೆ ಬಂದರು” ಎಂದಿದ್ದಾರೆ. ಕಲ್ಯಾಣಕ್ಕೆ ಅಲ್ಲಮಪ್ರಭುಗಳು ಆಗಮಿಸುವ ಸಂಭ್ರಮದ ಪರಿಯನ್ನು ಬಸವಣ್ಣನವರು ತಮ್ಮ ಮತ್ತೊಂದು ವಚನದಲ್ಲಿ ಈ ರೀತಿಯಾಗಿ ಸಂತಸಗೊಂಡಿದ್ದಾರೆ. “ಮನದೊಡೆಯ ಮನೆಗೆ ಬಂದಡೆ ಕನಕದ ತೋರಣವ ಕಟ್ಟಿ, ಷಡುಸಮ್ಮಾರ್ಜನೆಯ ಮಾಡಿ, ರಂಗವಾಲಿಯನಿಕ್ಕಿ, ಉಘೇ, ಚಾಂಗು, ಭಲಾ ಎಂಬೆನು. ಕೂಡಲಸಂಗಮದೇವಾ, ನಿಮ್ಮ ಶರಣ ಪ್ರಭುದೇವರು ಬಂದಡೆಉಬ್ಬಿ ಕೊಬ್ಬಿ ನಲಿನಲಿದಾಡುವೆ.” ಮಡಿವಾಳ ಮಾಚಿತಂದೆಯವರು ಬಸವಣ್ಣನವರಿಗೆ ನೈತಿಕ ಸ್ಥೈರ್ಯವನ್ನು ತುಂಬಿರುವುದನ್ನು ಕೊನೆಯಲ್ಲಿ ನೆನೆದಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

**2 ದಿನದಲ್ಲಿ ಕೆರೆಗೆ ನೀರು ತುಂಬಿಸದಿದ್ದರೆ ಸಾವಿರಾರು ರೈತರೊಂದಿಗೆ ಕೆರೆಯಲ್ಲಿಯೆ ಕುಳಿತು ಧರಣಿ ಸತ್ಯಾಗ್ರಹದ ಎಚ್ಚರಿಕೆ**

# ಜಂಬಗಿ, ಮಾದಾಳ ಕೆರೆ ನೀರು ತುಂಬುವಂತೆ ರೈತ ಸಂಘ ಆಗ್ರಹ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಂಬಗಿ ಕೆರೆ ಜಿಲ್ಲೆಯಲ್ಲಿಯೇ 2ನೇ ಅತೀದೊಡ್ಡ ಕೆರೆಯಾಗಿದ್ದು, ಹಾಗೂ ಹುಣಶ್ಯಾಳ (ಮಾದಾಳ) ಕೆರೆಗಳಲ್ಲಿ ನೀರು ತುಂಬಿದರೆ ಸುತ್ತಮುತ್ತಲಿನ 5-6 ಹಳ್ಳಿಗಳ ರೈತರಿಗೆ ಜನ ಜಾನುವಾರುಗಳಿಗೆ ಕುಡಿಯಲು ನೀರಿನ ಅನುಕೂಲವಾಗುವುದು ಮಾತ್ರವಲ್ಲದೇ, ಅಂತರ್ಜಲ ಮಟ್ಟ ಹೆಚ್ಚಾಗಿ ನೀರಿನ ಮೂಲಗಳು ಅಭಿವೃದ್ಧಿ ಹೊಂದುತ್ತವೆ. ಇದರಿಂದ ರೈತರಿಗೆ ಕೃಷಿ ಚಟುವಟಿ-ಕೆ ಮಾಡಲು ಅನುಕೂಲವಾಗುವುದು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.



ಈ ವೇಳೆ ಆಹೇರಿ ಗ್ರಾಮದ ಮಾಜಿ ಗ್ರಾ.ಪಂ ಚೇರಮನ್ ಬಸವರಾಜ ಗಾಣಿಗೇರ ಮಾತನಾಡಿ, ಜಿಲ್ಲೆಯ ಎಲ್ಲಾ ಕೆರೆಗಳು ತುಂಬುತ್ತಿದ್ದರೂ ಜಂಬಗಿ ಹಾಗೂ ಹುಣಶ್ಯಾಳ ಕೆರೆ ಮಾತ್ರ ತುಂಬದೇ ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಇಲ್ಲಿಯವರೆಗೆ ಕೆರೆ ನೀರು ತುಂಬದೇ ಪುರಾಣ ಹೇಳುತ್ತಿದ್ದಾರೆ, ಕೇಳಿದರೆ ನಿಮಗೆ ನೀರು ಬರುವುದಿಲ್ಲ, ನೀವು ಮೇಲಿನ ಅಧಿಕಾರಿಗಳಿಗೆ ಕೇಳಿ ಎಂದು ಹಾರಿಕೆ ಉತ್ತರ ನೀಡುತ್ತಿದ್ದಾರೆ ಎಂದರು.

ವಿಜಯಪುರ ತಾಲೂಕಾ ಉಪಾಧ್ಯಕ್ಷ ಮಹಾದೇವಪ್ಪ ತೇಲಿ ಅವರು ಮಾತನಾಡಿ, 2 ದಿನದಲ್ಲಿ ಕೆರೆ ನೀರು ತುಂಬಿಸದಿದ್ದರೆ ಸಾವಿರಾರು ರೈತರೊಂದಿಗೆ ಕೆರೆಯಲ್ಲಿಯೆ ಕುಳಿತು ಧರಣಿ ಸತ್ಯಾಗ್ರಹ ಮಾಡಲಾಗುವುದು. ರೈತರ ನಿರ್ಣಯದಿಂದ ಅದು ಮುಂದೆ ಅಮರಣ ಉಪವಾಸ ಸತ್ಯಾಗ್ರಹ ಮಾಡಬಹುದು, ಅದಕ್ಕೆ ಅವಕಾಶ ನೀಡದೇ ಜಿಲ್ಲಾಧಿಕಾರಿಗಳು ಕೂಡಲೇ ಸಂಬಂಧಿಸಿದ ಅಧಿಕಾರಿಗಳಿಗೆ ಕೆರೆ ತುಂಬಿಸುವಂತೆ ಆದೇಶ ನೀಡಬೇಕಾಗಿ ಸಮಸ್ತ ರೈತರೊಂದಿಗೆ ಆಗ್ರಹಿಸುತ್ತಾ ಇದ್ದೇವೆ ಎಂದರು.


ಈ ವೇಳೆ ಜಿಲ್ಲಾ ಗೌರವಾಧ್ಯಕ್ಷ ಕಲ್ಲಪ್ಪ ಪಾರಶೆಟ್ಟಿ, ಜಿಲ್ಲಾ ಸಂಚಾಲಕ ರಾಮನಗೌಡ ಪಾಟೀಲ, ತಾಲೂಕಾ ಉಪಾಧ್ಯಕ್ಷ ಪ್ರಕಾಶ ತೇಲಿ, ಸದಸ್ಯರಾದ ಪ್ರಭು ಕಾರಜೋಳ, ಬಸವರಾಜ ಮಸೂತಿ, ಶರಣಪ್ಪ ಜಮಖಂಡಿ, ಜಯಸಿಂಗ ರಜಪೂತ, ಸಂತೋಷ ಮುಡಗಿ, ಅನಮೇಶ ಜಮಖಂಡಿ, ರಾಮಸಿಂಗ ರಜಪೂತ, ಅಮೀತ ಡಿಗ್ಗಾಯಿ, ಮಹಾಂತೇಶ ಮಾಗಣಗೇರಿ, ಬಸವರಾಜ ಭೈರವಾಡಗಿ, ಆತ್ಮಾನಂದ ಭೈರವಾಡಗಿ, ರೇವಣಸಿದ್ಧ ಪೂಜಾರಿ, ಸಿದ್ಧಪ್ಪ ಕಾರಜೋಳ, ಸಂಗಪ್ಪ ಕೊಣಸಿರಸಗಿ, ಯಲ್ಲಪ್ಪ ದಿನ್ನಿ, ಬಸವಂತ ತೇಲಿ, ಗಣೇಶ ಸಮಗಾರ, ಕಲ್ಲಪ್ಪ ಸೋಲಾಪುರ, ಲಚ್ಚಾರಾಮ ರಜಪೂತ ಸೇರಿದಂತೆ ಅನೇಕರು ಇದ್ದರು.

> “ ಜಿಲ್ಲೆಯ ಎಲ್ಲಾ 149 ಕೆರೆಗಳನ್ನು ತುಂಬಿದ್ದೇವೆ ಎಂದು ಹೇಳುತ್ತಿರುವ ಅಧಿಕಾರಿಗಳು ಖುದ್ದಾಗಿ ಸಮೀಕ್ಷೆ ಮಾಡಿ ಇದರಲ್ಲಿ ಅರ್ಧ ಮಾತ್ರ ಕೆರೆ ನೀರು ತುಂಬಿರುತ್ತಾರೆ, ಉಳಿದ ಅರ್ಧ ಕೆರೆ ತುಂಬದೇ ರೈತರಿಗೆ ಅನ್ಯಾಯ ಮಾಡುತ್ತಿದ್ದಾರೆ, ಇದರಿಂದ ಜನ ಜಾನುವಾರುಗಳಿಗೆ ಈ ಭೀಕರ ಬೇಸಿಗೆಯಲ್ಲಿ ಕುಡಿಯಲು ನೀರು ಸಿಗದೇ ಸಾಕಷ್ಟು ಕಷ್ಟ ಅನುಭವಿಸುವಂತಾಗಿದೆ. ಕೂಡಲೇ ಜಿಲ್ಲಾಧಿಕಾರಿಗಳು ಜಿಲ್ಲೆಯ 149 ಕೆರೆಗಳನ್ನು ತುಂಬಿಸಿ ರೈತರಿಗೆ ಅನುಕೂಲಮಾಡಬೇಕು.”
>
> **– ಸಂಗಮೇಶ ಸಗರ,** ಜಿಲ್ಲಾಧ್ಯಕ್ಷರು, ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ

# ಗ್ರಾಮೀಣ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶ್ರಮಿಸಿದ ಸುಭಾಸ ಕಲ್ಲೂರ

**ಉದಯರಶ್ಮಿ ನ್ಯೂಸ್**

ಇಂಡಿ: ತಾಲೂಕಿನ ತಾಂಬಾ ಗ್ರಾಮದಲ್ಲಿ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುತ್ತ ಅವರ ಬಾಳನ್ನು ಬೆಳಗಿಸಿ ಶಿಕ್ಷಣ ಕ್ರಾಂತಿ ಮಾಡಿದ ಸುಭಾಸ ಎಸ್. ಕಲ್ಲೂರ ಅವರು ಬಡವರು, ನಿರ್ಗತಿಕರು, ಅಲ್ಪಸಂಖ್ಯಾತರ ಮತ್ತು ಗ್ರಾಮೀಣ ಜನರ ಜೀವನಮಟ್ಟ ಸುಧಾರಿಸಿದ ದಿವ್ಯ ಚೇತನ ಎಂದು ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ ಹೇಳಿದರು.



ತಾಂಬಾ ಗ್ರಾಮದಲ್ಲಿ ಬುಧವಾರ ನಡೆದ ವೃಷಭಲಿಂಗೇಶ್ವರ ವಿದ್ಯಾ ವರ್ಧಕ ಸಂಘದ ನಿರ್ದೇಶಕ ಸುಭಾಸ ಎಸ್. ಕಲ್ಲೂರ 3ನೇ ಪುಣ್ಯಸ್ಮರಣೆ ಮತ್ತು ಮೂರ್ತಿ ಅನಾವರಣ ಸಮಾರಂಭದಲ್ಲಿ ಮಾತನಾಡಿ, 1986 ರಲ್ಲಿ ವೃಷಭಲಿಂಗೇಶ್ವರ ವಿದ್ಯಾ ವರ್ಧಕ ಸಂಘದ ನಿರ್ದೇಶಕರಾಗಿ ಗ್ರಾಮೀಣ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಶ್ರಮಿಸಿದ್ದಾರೆ. ಅವರ ಶಿಕ್ಷಣ ಪ್ರೇಮ, ಸಾಮಾಜಿಕ ಕಳಕಳಿ, ಸೇವಾ ಮನೋಭಾವ ಮಾದರಿಯಾಗಿದೆ. ಇಂತಹ ಮಹಾನ್ ವ್ಯಕ್ತಿಗಳ ಜೀವನಾದರ್ಶವನ್ನು ಅಳವಡಿಸಿಕೊಳ್ಳಬೇಕು ಎಂದರು.

ಸಿಂದಗಿ ಶಾಸಕ ಅಶೋಕ ಮನಗೂಳಿ ಮಾತನಾಡಿ, ಸುಭಾಸ ಎಸ್. ಕಲ್ಲೂರ ಅವರು ಜನರ ಕಣ್ಣಿನಿಂದ ಮರೆಯಾದರೂ, ಅವರು ಮಾಡಿರುವ ಕಾರ್ಯಗಳು ಜನರ ಮನಸ್ಸಿನಲ್ಲಿ ಅಚ್ಚಳಿಯದೇ ಉಳಿದಿವೆ, ಕೇವಲ ಶಿಕ್ಷಣ ಕ್ಷೇತ್ರದಲ್ಲಷ್ಟೇ ಅಲ್ಲ, ರಾಜಕೀಯದಲ್ಲೂ ಕ್ರಾಂತಿ ಮಾಡಿದ್ದಾರೆ. ಬಡ ಕುಟುಂಬದಲ್ಲಿ ಜನಿಸಿದ ಅವರು ಸತತ ಪರಿಶ್ರಮದಿಂದ ಸಾಧನೆಗೈದು ಗ್ರಾಮೀಣ ಕ್ಷೇತ್ರದಲ್ಲಿ ಹಿಂದುಳಿದ ಸಮಾಜದ ಅಭಿವೃದ್ಧಿಗೆ ಶ್ರಮಿಸಿದವರು ಎಂದು ಬಣ್ಣಿಸಿದರು.

ಶಿರಶ್ಯಾಡ ಅಭಿನವ ಮುರುಘೇಂದ್ರ ಶ್ರೀಗಳು, ಹಿರೇರೂಗಿ ಮಾತೋಶ್ರೀ ಸುಗಲಾದೇವಿ ಅಮ್ಮನವರು, ಮಾಜಿ ಶಾಸಕ ರಮೇಶ ಭೂಸನೂರ, ಮಾಜಿ ಶಾಸಕ ದೇವಾನಂದ ಚವ್ಹಾಣ, ಮಲ್ಲಿಕಾಜುನ ಲೋಣಿ, ಜಿಲ್ಲಾ ಕಸಾಪ ಅಧ್ಯಕ್ಷ ಹಾಸಿಂಪೀರ ವಾಲಿಕಾರ, ಜೆ.ಎಸ್. ಹತ್ತಳ್ಳಿ ಮಾತನಾಡಿದರು.

ಬಂಥನಾಳ ವೃಷಭಲಿಂಗೇಶ್ವರ ಶ್ರೀಗಳು, ವೀರಗೋಟ ಅಡವಿಲಿಂಗ ಮಹಾರಾಜರು, ಗೊಳಸಾರ ಅಭಿನವ ಪುಂಡಲಿಂಗ ಶ್ರೀಗಳು, ತಡವಲಾಗ ರಾಚೋಟೇಶ್ವರ ಶ್ರೀಗಳು, ಶಕುಂತಲಾ ಎಸ್ ಕಲ್ಲೂರ, ಅಪ್ಪಣ್ಣ ಎಸ್ ಕಲ್ಲೂರ, ಶೃತಿ ಅಪ್ಪಣ್ಣ ಕಲ್ಲೂರ, ಪ್ರಕಾಶ ಎಸ್ ಕಲ್ಲೂರ, ಜ್ಯೋತಿ ಶರಣು ಮ್ಯಾಳಗಿ, ಸೌಮ್ಯಾ ಸಿದರಾಯ ಡೊಳ್ಳಿ, ಶಿಲ್ಪಾ ಸಿದ್ದನಗೌಡ ಶಿರಕನಹಳ್ಳಿ ಅಣ್ಣಾರಾಯಗೌಡ ಎಸ್. ಬಿರಾದಾರ ವಿಜಯಕುಮಾರ ಎಸ್ ಕಾಬಾ ಮತ್ತಿತರಿದ್ದರು.

# ಭೀಮಾ ಯುನಿವರ್ಸಲ್ ಸೆಂಟ್ರಲ್ ಸ್ಕೂಲ್ ಶೇ.100 ಫಲಿತಾಂಶ

**ಉದಯರಶ್ಮಿ ನ್ಯೂಸ್**

ಸಿಂದಗಿ: ಪಟ್ಟಣದ ಹೊರವಲಯದಲ್ಲಿರುವ ಭೀಮಾ ಯುನಿವರ್ಸಲ್ ಸೆಂಟ್ರಲ್ ಸ್ಕೂಲ್‌ನ ಪ್ರಸಕ್ತ ಸಾಲಿನ ಸಿ.ಬಿ.ಎಸ್.ಸಿ 10ನೇ ತರಗತಿಯ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದಾರೆ.



10ನೇ ತರಗತಿಯ ವಾರ್ಷಿಕ ಪರೀಕ್ಷೆಗೆ ಹಾಜರಾದ ಒಟ್ಟು 62 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ 09 ವಿದ್ಯಾರ್ಥಿಗಳು, 42 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ, 11 ವಿದ್ಯಾರ್ಥಿಗಳು ಪಾಸಾಗಿದ್ದಾರೆ. ಶಾಲೆಯ ಒಟ್ಟು ಪಲಿತಾಂಶ 100ಕ್ಕೆ 100ರಷ್ಟಾಗಿದೆ.

ವಿದ್ಯಾರ್ಥಿನಿಯರ ಕಠಿಣ ಪರಿಶ್ರಮ, ಶಾಲೆಯ ಶಿಕ್ಷಕರ ಅತ್ಯುತ್ತಮ ಭೋಧನೆಯಿಂದ ನಮ್ಮ ಸಂಸ್ಥೆಯ ವಿದ್ಯಾರ್ಥಿಗಳು ಅತ್ಯುನ್ನತ ಅಂಕಗಳನ್ನು ಪಡೆಯುವದರೊಂದಿಗೆ ಶಾಲೆಯ ಪಲಿತಾಂಶ ಶೇ.100ಕ್ಕೆ 100 ರಷ್ಟು ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಪಡೆದಿದ್ದು ನಮಗೆ ಬಹಳ ಹೆಮ್ಮೆ ತಂದಿದೆ ಎಂದು ಅಧ್ಯಕ್ಷ ವಿಠ್ಠಲ ಕೋಳೂರ ಪ್ರತಿಕ್ರಿಯಿಸಿ, ವಿದ್ಯಾರ್ಥಿಗಳಿಗೆ ಶುಭ ಹಾರೈಸಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಸಂಸ್ಥೆಯ ಆಡಳಿತ ಮಂಡಳಿಯ ಎಲ್ಲಾ ನಿರ್ದೇಶಕರು ಸೇರಿದಂತೆ ಪ್ರಾಚಾರ್ಯರು ಮತ್ತು ಸಿಬ್ಬಂದಿ ವರ್ಗದವರು ವಿದ್ಯಾರ್ಥಿನಿಯರಿಗೆ ಶುಭ ಕೋರಿದ್ದಾರೆ.

# ಜಗತ್ತಿನಲ್ಲಿ ಭಕ್ತಿ-ಭಾವ ಕಡಿಮೆಯಾಗಬಾರದು

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಜಗತ್ತಿನಲ್ಲಿ ಭಕ್ತಿ ಭಾವ ಕಡಿಮೆಯಾದರೆ ಸಮಾಜಕ್ಕೆ ಕಂಟಕವಾಗುತ್ತದೆ. ಈ ನಿಟ್ಟಿನಲ್ಲಿ ಭಕ್ತಿ ಭಾವ ಕಡಿಮೆಯಾಗದಂತೆ ಜನರು ಗಮನ ಹರಿಸುವುದು ತುಂಬಾ ಅಗತ್ಯವಿದೆ ಎಂದು ಸಿಂದಗಿಯ ಸಾರಂಗಮಠದ ಡಾ.ಪ್ರಭುಸಾರಂಗ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ತಾಲೂಕಿನ ಉತ್ನಾಳ ಗ್ರಾಮದ ಮಹಾಲಕ್ಷ್ಮೀದೇವಿಯ 31 ನೇ ಜಾತ್ರಾಮಹೋತ್ಸವದಂಗವಾಗಿ ಮಂಗಳವಾರ ಹಮ್ಮಿಕೊಂಡಿದ್ದ ಧರ್ಮಸಭೆ, ಮುತ್ತೈದೆಯರ ಉಡಿ ತುಂಬುವ ಕಾರ್ಯಕ್ರಮ, ಶ್ರೀಮಠದ ಪುಸ್ತಕ ಬಿಡುಗಡೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಅನೇಕ ಮಠ-ಮಾನ್ಯಗಳು ಭಕ್ತರಿಗೆ ಅನೇಕ ಧಾರ್ಮಿಕ ಕಾರ್ಯಕ್ರಮಗಳನ್ನು ಕೈಗೊಳ್ಳುತ್ತವೆ. ಇಂತಹ ಕಾರ್ಯಕ್ರಮಗಳಲ್ಲಿ ಜನರು ಹೆಚ್ಚು ಭಾಗವಹಿಸುವ ಮೂಲಕ ಧರ್ಮ ಮತ್ತು ಸಂಸ್ಕೃತಿಯನ್ನು ಅರಿತು ಅದನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಸುಂದರವಾದ ಜೀವನವನ್ನು ತಮ್ಮದಾಗಿಸಿಕೊಳ್ಳಬೇಕು. ಈಚೆಗೆ ಧರ್ಮ ಮತ್ತು ಸಂಸ್ಕೃತಿ ಮೊದಲಿನಂತೆ ಉಳಿಯುತ್ತಿಲ್ಲ. ಇದನ್ನು ಹೀಗೆ ಮುಂದುವರಿಯಲು ಬಿಟ್ಟರೆ ಸಮಾಜಕ್ಕೆ ಕಂಟಕವಾಗುತ್ತದೆ. ಇದನ್ನು ಅರಿತುಕೊಂಡು ಪ್ರತಿಯೊಬ್ಬರೂ ಧರ್ಮ, ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಕಾರ್ಯದಲ್ಲಿ ತೊಡಗಿಕೊಳ್ಳಬೇಕೆಂದರು.

ಪ್ರತಿವರ್ಷ ಉತ್ನಾಳದ ಹಿರೇಮಠವು ಮಹಾಲಕ್ಷ್ಮೀದೇವಿ ಜಾತ್ರಾಮಹೋತ್ಸವದಂಗವಾಗಿ ವಿವಿಧ ಧಾರ್ಮಿಕ, ಸಾಂಸ್ಕೃತಿಕ, ಸಾಮಾಜಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಮೂಲಕ ಎಲ್ಲ ಜನರಿಗೆ ಒಳಿತು ಮಾಡುತ್ತಿರುವ ಕಾರ್ಯ ಶ್ಲಾಘನೀಯ ಎಂದರು.

ಸಾನಿಧ್ಯ ವಹಿಸಿದ್ದ ಶಹಾಪುರದ ಸೂಗೂರೇಶ್ವರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಭೂಮಿಯಲ್ಲಿ ಜನ್ಮವೆತ್ತಿದ ಪ್ರತಿಯೊಂದು ಜೀವರಾಶಿಗೆ ಬದುಕು ನೀಡುವ ತಾಯಿ ಪೂಜನೀಯ. ಇಂತಹ ತಾಯಿಗೆ ಉಡಿ ತುಂಬುವ ಮೂಲಕ ಅವಳಿಗೆ ಕೃತಜ್ಞತೆಯನ್ನು ಸಲ್ಲಿಸಬೇಕು. ಭೂ ತಾಯಿಗೂ




ಎಳ್ಳಅಮವಾಸ್ಯೆ ದಿನದಂದು ಉಡಿ ತುಂಬಿದರೆ, ಜೀವಂತ ತಾಯಂದಿರಿಗೆ ಪ್ರತಿಯೊಂದು ಪುಣ್ಯ ಕಾರ್ಯದಲ್ಲಿ ಉಡಿ ತುಂಬುವ ಮೂಲಕ ಧನ್ಯತಾ ಭಾವ ಅನುಭವಿಸುವದನ್ನು ನೋಡುತ್ತೇವೆ. ಈ ಜಾತ್ರಾಮಹೋತ್ಸವದಲ್ಲಿ ಸಾವಿರಾರು ಮುತ್ತೈದೆಯರಿಗೆ ಪ್ರತಿವರ್ಷ ಉಡಿ ತುಂಬುವ ಕಾರ್ಯ ನಡೆಯುತ್ತಿರುವದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ನಾಗಣಸೂರಿನ ಬೊಮ್ಮಲಿಂಗೇಶ್ವರ, ಬೃಹನ್ಮಠದ ಶ್ರೀಕಂಠ ಶಿವಾಚಾರ್ಯರು, ಕಲಕೇರಿಗೆಯ ಮಡಿವಾಳೇಶ್ವರ ಶಿವಾಚಾರ್ಯರು, ಕರಭಂಟನಾಳದ ಶಿವಕುಮಾರ ಸ್ವಾಮೀಜಿ ಇದ್ದರು. ನೇತೃತ್ವವನ್ನು ಶ್ರೀಮಠದ ಮಹಾಲಕ್ಷ್ಮೀದೇವಿ ಆರಾಧಕ ಶಿವಪುತ್ರಯ್ಯ ಹಿರೇಮಠ ವಹಿಸಿದ್ದರು.

ನಿವೃತ್ತ ಎಸ್ಪಿ ಬಿ.ಐ.ಬೆಳ್ಳುಬ್ಬಿ,ಪ್ರಭು ಎಂ., ಎಸ್.ಎಸ್.ಗೊಳಸಂಗಿ, ಎಂ.ಬಿ.ಜಮಖಂಡಿ, ಬಿ.ಬಿ.ಬೋಸ್ಲೆ, ಶರಣಯ್ಯ ಹಿರೇಮಠ, ರವಿಕುಮಾರ ನಾಗೂರ, ಶರಣು ಮನ್ನಿಕಟ್ಟಿ, ಅಂಕಣಕಾರ ಪ್ರಶಾಂತ ರಿಪ್ಪನಪೇಟ, ಶರಣು ಸಜ್ಜನ, ಡಾ.ಪ್ರಶಾಂತ ಕಮತಗಿ, ಡಾ.ಸುನೀಲ ಪಾಟೀಲ, ಮಲ್ಲು ಅಲ್ಲಾಪುರ, ಶಶಿಕಲಾ ಹಿರೇಮಠ,ಗುರುಬಸಯ್ಯ ಕಟಗೇರಿಮಠ, ಬಸವರಾಜ ಬಿರಾದಾರ, ಮಲ್ಲಿಕಾರ್ಜುನ ಸಜ್ಜನ, ಡಾ.ಅಮರೇಶ ಮಿಣಜಗಿ ಇತರರು ಇದ್ದರು.

ಕಾರ್ಯಕ್ರಮಕ್ಕೂ ಮುನ್ನ ಬೆಳಗ್ಗೆ ಮಹಾಲಕ್ಷ್ಮೀದೇವಿ ಮೂರ್ತಿಗೆ ವಿಶೇಷ ರುದ್ರಾಭಿಷೇಕ, ಕುಂಕುಮಾರ್ಚನೆ, ಪೂಜೆ, ಚಂಡಿಹೋಮ, ಪಲ್ಲಕ್ಕಿ ಉತ್ಸವ ಸೇರಿದಂತೆ ವಿವಿಧ ಪೂಜಾ ಕಾರ್ಯಗಳು ಜರುಗಿದವು. ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

ಎಂ.ಎಸ್.ಸಜ್ಜನ ಸ್ವಾಗತಿಸಿದರು. ಎಂ.ಬಿ.ಟಕ್ಕಳಕಿ ನಿರೂಪಿಸಿದರು. ಸಂಗಮೇಶ ಹಿರೇಮಠ ವಂದಿಸಿದರು.

ಇದೇ ಸಂದರ್ಭದಲ್ಲಿ ಶ್ರೀಮಠದ ಶಿವಪುತ್ರಯ್ಯ ಹಿರೇಮಠ ಅವರ ಸುಪುತ್ರ ಡಾ.ಮಹಾಂತೇಶ ಹಿರೇಮಠ ಅವರು ಆಯುರ್ವೇದದಲ್ಲಿ ಎಂಡಿ ಪದವಿ ಪಡೆದ ಹಿನ್ನೆಲೆಯಲ್ಲಿ ಅವರನ್ನು ವಿವಿಧ ಶ್ರೀಗಳ ಸಾನಿಧ್ಯದಲ್ಲಿ ಸನ್ಮಾನಿಸಲಾಯಿತು.

ನೂರಾರು ಮುತ್ತೈದೆಯರಿಗೆ ಶಶಿಕಲಾ ಹಿರೇಮಠ ಅಮ್ಮನವರ ಸಾನಿಧ್ಯದಲ್ಲಿ ಉಡಿ ತುಂಬುವ ಕಾರ್ಯ ನೆರವೇರಿತು.

# ವಿದ್ಯುತ್ ಬಿಲ್ ತುಂಬುವವರಿಗೆ ನೆರಳಿನ ವ್ಯವಸ್ಥೆಗೆ ಆಗ್ರಹ



**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಸರ್ಕಾರ ಪಂಚಗ್ಯಾರಂಟಿಗಳಲ್ಲಿ 200 ಯುನಿಟ್ ಬಳಕೆ ಮಾಡುವ ಗ್ರಾಹಕರಿಗೆ ಉಚಿತ ವಿದ್ಯುತ್ ನೀಡುತ್ತಿದೆಯಾದರೂ ವಿದ್ಯುತ್ ಬಿಲ್ ಕಟ್ಟುವ ಗ್ರಾಹಕರು ಸ್ಥಳೀಯ ಹೆಸ್ಕಾಂ ಕಚೇರಿಯ ಬಿಲ್ ಕೇಂದ್ರದ ಮುಂದೆ ನಿತ್ಯವೂ ಬಿಸಿಲಿನಲ್ಲಿಯೇ ನಿಂತು ತುಂಬುತ್ತಿರುವದು ಕಂಡುಬರುತ್ತಿದೆ.

ವಿದ್ಯುತ್ ಬಿಲ್ ಕಟ್ಟುವ ಒಂದು ಬದಿಯಲ್ಲಿ ಇಳಿಜಾರು ಇರುವದರಿಂದಾಗಿ ವೃದ್ದರಿಗೆ ತುಂಬಾ ತೊಂದರೆಯಾಗುತ್ತಿದೆ. ಬಿಲ್ ತುಂಬಲು ಬರುವ ಗ್ರಾಹಕರು ತಮ್ಮ ಬಿಲ್ ರಸೀದಿ ಬರುವವರೆಗೂ ಬಿಸಿಲಿನಲ್ಲಿಯೇ ನಿಂತು ಕೊಳ್ಳುವುದು ಅನಿವಾರ್ಯವಾಗಿದೆ. ಬಿಲ್ ರಸೀದಿ ತಡವಾಗಿ ಬರುತ್ತಿದೆ. ಇದರಿಂದಾಗಿ ಗ್ರಾಹಕರು ಕಾಯ್ದು ತೆಗೆದುಕೊಂಡು ಹೋಗಬೇಕಾಗಿದೆ. ಕೂಡಲೇ ಸಂಬಂಧಿಸಿದ ಅಧಿಕಾರಿಗಳು ಇದರ ಕಡೆಗೆ ಗಮನ ಹರಿಸಬೇಕೆಂದು ಎಂ.ಬಿ.ತೋಟದ ಹೇಳುತ್ತಾರೆ.

# ಇಂಡಿ ತಾಲೂಕಿನಲ್ಲಿ 27.7 ಮಿ.ಮಿ ಮಳೆ

**ಉದಯರಶ್ಮಿ ನ್ಯೂಸ್**



ಇಂಡಿ: ತಾಲೂಕಿನಲ್ಲಿ ಮಂಗಳವಾರ ರಾತ್ರಿ 27.7 ಮಿ.ಮಿ ಮಳೆಯಾಗಿದೆ ಎಂದು ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಮಹಾದೇವಪ್ಪ ಏವೂರ ತಿಳಿಸಿದ್ದಾರೆ.

ಇಂಡಿ 26.7 ಮಿ.ಮಿ, ನಾದ ಬಿ.ಕೆ 8.2 ಮಿ.ಮಿ, ಅಗರಖೇಡ 11.1 ಮಿ.ಮಿ, ಹೊರ್ತಿ 34.0 ಮಿ.ಮಿ, ಝಳಕಿ 58.5 ಮಿ.ಮಿ, ಹಲಸಂಗಿ 22.0 ಮಿ.ಮಿ. ಮಳೆಯಾಗಿದೆ ಎಂದು ಮಹಾದೇವಪ್ಪ ಏವೂರ ತಿಳಿಸಿದ್ದಾರೆ.

ಉದಯರಶ್ಮಿ
ಪ್ರತಿ ಮನೆ-ಮನದ ಸಂಗಾತಿ

# ಬೆಳೆಹಾನಿ ಪರಿಹಾರ ರೈತರ ಖಾತೆಗೆ ಜಮೆ :ಎಸಿ ಗದ್ಯಾಳ

**ಉದಯರಶ್ಮಿ ನ್ಯೂಸ್**

ಇಂಡಿ: ಮುಂಗಾರು ಹಂಗಾಮಿನಲ್ಲಿ ಬರ ಪರಿಸ್ಥಿತಿಯಿಂದ ಉಂಟಾದ ಬೆಳೆ ಹಾನಿಗೆ ಅರ್ಹತೆಯಂತೆ ಬೆಳೆ ಹಾನಿ ಮೊತ್ತವನ್ನು ರೈತರ ಖಾತೆಗಳಿಗೆ ನೇರವಾಗಿ ಸರಕಾರದಿಂದ ಡಿಬಿಟಿ ಮೂಲಕ ಹಣ ಬಿಡುಗಡೆ ಮಾಡಲಾಗಿದೆ ಎಂದು ಕಂದಾಯ ಉಪವಿಬಾಗಾಧಿಕಾರಿ ಅಬೀದ್ ಗದ್ಯಾಳ ತಿಳಿಸಿದ್ದಾರೆ.

ರೈತರು ತಮ್ಮ ಖಾತೆಗೆ ಜಮಾ ಆಗಿರುವ ಹಣದ ಕುರಿತು ಪರಿಶೀಲಿಕೊಂಡು ಬೆಳೆ ಹಾನಿ ಪರಿಹಾರ ಜಮಾ ಅಗದೇ ಇದ್ದ ಸಂದರ್ಭದಲ್ಲಿ 08359 225020, 08359 225003 ಗೆ ಸಂಪರ್ಕಿಸಲು ಗದ್ಯಾಳ ತಿಳಿಸಿದ್ದಾರೆ.

ಅದಲ್ಲದೆ ರೈತರಿಗೆ ಪರಿಹಾರ ಬರದಿದ್ದರೆ ರೈತರು ತಮ್ಮ ಖಾತೆಗೆ ಆಧಾರ ಲಿಂಕ ಮತ್ತು ಇಕೆವೈಸಿ ಮಾಡಿಸಬೇಕು. ಅದಲ್ಲದೆ ರೈತರು ಎಫ್‌ಐಡಿ ಮತ್ತು ಎನ್‌ಪಿಸಿಐ ಮಾಡಿಸಿರಬೇಕು. ಅದಲ್ಲದೆ ರೈತರು ಬ್ಯಾಂಕಿಗೆ ಹೋಗಿ ಅಕೌಂಟ್ ರಿ ಒಪನ್ ಪಾಡಿಸಬೇಕು. ಪ್ರುಟ್ ತಂತ್ರಾಂಶದಲ್ಲಿ ಹೆಸರು ಅಪ್ಲೆಡ್ ಆಗಿರಬೇಕು. ಸದರಿ



ಫಲಾನುಭವಿಗಳು ಬ್ಯಾಂಕಿಗೆ ಹೋಗಿ ಎನ್.ಪಿ.ಸಿ ಐ ಮಾಡಿಸಬೇಕೆಂದು ಗದ್ಯಾಳ ತಿಳಿಸಿದ್ದಾರೆ.

ಇಂಡಿ ತಾಲೂಕಿನ 42320 ರೈತರಿಗೆ 64 ಕೋಟಿ 71 ಲಕ್ಷ 96,795 ರೂ ಹಣ ಬಿಡುಗಡೆಯಾಗಿದೆ ಎಂದರು.

# ಸರ್ಕಾರಿ ಕಾಲೇಜ್: ಪದವಿ ತರಗತಿಗಳಿಗೆ ಪ್ರವೇಶ ಪ್ರಾರಂಭ

**ಉದಯರಶ್ಮಿ ನ್ಯೂಸ್**

ಸಿಂದಗಿ: ಪಟ್ಟಣದ ಸ್ಥಳೀಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ 2024-25ನೆಯ ಸಾಲಿನ ಶೈಕ್ಷಣಿಕ ವರ್ಷದ ಬಿಎ, ಬಿ.ಕಾಂ, ಬಿ.ಬಿ.ಎ ಮತ್ತು ಬಿ.ಎಸ್ಸಿ ಪದವಿ ತರಗತಿಗಳಿಗೆ ಪ್ರವೇಶಗಳು ಪ್ರಾರಂಭವಾಗಿವೆ ದ್ವೀತಿಯ ಪಿಯುಸಿ ಪಾಸಾದ ವಿದ್ಯಾರ್ಥಿಗಳು ಕೂಡಲೇ ಪ್ರವೇಶಾತಿ ಪಡೆಯಬೇಕು ಎಂದು ಪ್ರಾಚಾರ್ಯ ಎಸ್.ಎಸ್. ಹಳೇಮನಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಸಿದ್ದಾರೆ.




# ಸಾಧನೆಯಿಂದ ಉಜ್ವಲ ಭವಿಷ್ಯ ಸಾಧ್ಯ :ಶರಣು ಸಬರದ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ಆದರ್ಶ ನಗರ ಶಿವಾಲಯದಲ್ಲಿ ನಾಟ್ಯಕಲಾ ಅಕಾಡೆಮಿ ವತಿಯಿಂದ ಗೆಜ್ಜೆಪೂಜೆ ಸಮಾರಂಭ ಜರುಗಿತು.

ಜಿಲ್ಲಾ ಯುವ ಪರಿಷತ್ ಅಧ್ಯಕ್ಷ ಶರಣು ಸಬರದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ, ಇಂದಿನ ಮೊಬೈಲ್ ಯುಗದಲ್ಲಿ ಮಕ್ಕಳು ತಮ್ಮೋಳಗಿರುವ ಪ್ರತಿಭೆಯನ್ನು ಹೊರ ಹಾಕದೆ ತಮ್ಮ ಅಮೂಲ್ಯ ಸಮಯವನ್ನು ಪೆಸ್ಬುಕ್, ವಾಟ್ಸಪ್ ನಂತಹ ಜಾಲತಾಣಗಳಲ್ಲಿ ಕಾಲಹರಣ ಮಾಡುತ್ತಿದ್ದಾರೆ. ಪಾಲಕರು ತಮ್ಮ ಮಕ್ಕಳನ್ನು ಇಂತಹ ಭರತನಾಟ್ಯ ಕಲೆಗಳಲ್ಲಿ ತೊಡಗಿಸುತ್ತಿರುವದು ಬಹಳ ಸಂತಸದ ಸಂಗತಿ. ಮಕ್ಕಳು ಕೂಡಾ ತಂದೆ ತಾಯಿಗಳ ಅಮೂಲ್ಯ ಸಮಯದ ಜೊತೆಗೆ ತಮ್ಮ ಆಸೆ, ಆಕಾಂಕ್ಷೆಗಳನ್ನು ಬತ್ತಿಗೊತ್ತಿ ಮಕ್ಕಳ ಭವಿಷ್ಯ ರೂಪಿಸುವಲ್ಲಿ ಹಗಲಿರುಳು ಶ್ರಮಿಸುತ್ತಿರುವ



ಶ್ರಮಕ್ಕೆ ಮಕ್ಕಳು ಸಹ ಗಮನದಲ್ಲಿ ಇಟ್ಟುಕೊಂಡು ಸಾಧನೆಗೆ ಮುಂದಾಗಬೇಕೆಂದರು.

ಅತಿಥಿಗಳಾಗಿ ಶ್ರೀಮತಿ ಮಧುಮತಿ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಶ್ರೀಮತಿ ಮಂಜುಳಾ ಹಿಪ್ಪರಗಿ, ದತ್ತಾತ್ರೇಯ ಹಿಪ್ಪರಗಿ, ನಾಟ್ಯಕಲಾ ಅಕಾಡೆಮಿ ಅದ್ಯಕ್ಷೆ ಶ್ರೀಮತಿ ಲಕ್ಷ್ಮಿ ತೇರದಾಳಮಠ, ರಾಹುಲ್ ಕಾಖಂಡಕಿ, ಕರುಣಾ ಬಂಬುರೆ ಉಪಸ್ಥಿತರಿದ್ದರು.

ಮಕ್ಕಳು ಭರತನಾಟ್ಯ ಕಲೆಯನ್ನು ಪ್ರದರ್ಶನ ಮಾಡಿದರು.

# ಭಾಷೆಗೆ ನಿಲುಕದ ಭಾವ

**ಉದಯರಶ್ಮಿ ದಿನಪತ್ರಿಕೆ**

ವೀಣಾಂತರಂಗ



-ವೀಣಾ ಎಚ್. ಪಾಟೀಲ್, ಮುಂಡರಗಿ

ಪ್ರತಿದಿನ ಮುಂಜಾನೆ ಯೋಗಾಸನದ ನಂತರ ಮನೆಯ ಮುಂದೆ ವಾಕ್ ಮಾಡುವುದು ನನ್ನ ರೂಢಿಯಾಗಿದೆ. ಇಂದು ಮುಂಜಾನೆ ನಾನು ವಾಕ್ ಮಾಡುತ್ತಿರುವಾಗ ಕಂಡ ಒಂದು ದೃಶ್ಯ ಮನಸ್ಸಿನಲ್ಲಿ ಅಚ್ಚೊತ್ತಿದಂತೆ ಪರಿಣಾಮ ಬೀರಿತು. ಭಾಷೆಗೆ ನಿಲುಕದ ಭಾವಗೀತೆಯ ಹಾಡಿದ ಅನುಭವವನ್ನು ಕಣ್ಣಾರೆ ಕಂಡಂತಾಯಿತು.

ಸಾಮಾನ್ಯವಾಗಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯವರು ಕೆಲವು ವರ್ಷಗಳ ಹಿಂದೆ ನಿಲ್ಲಿಸುವಂತೆ, ಗ್ರಾಹಕರ ಅಪೇಕ್ಷೆಯ ಮೇರೆಗೆ ಬೇಕು ಬೇಕಾದಲ್ಲಿ ಬಸ್ಸುಗಳನ್ನು ನಿಲ್ಲಿಸುವುದಿಲ್ಲವಷ್ಟೇ. ಆದರೆ ಇಂದು ಮುಂಜಾನೆ ನಮ್ಮ ಮನೆಯ ಮುಂದೆ ಹಾದು ಹೋಗುವ ರಾಜ್ಯ ಹೆದ್ದಾರಿಯಲ್ಲಿ ಸರ್ಕಾರಿ ಬಸ್ಸೊಂದು ಕೆಲ ಕ್ಷಣಗಳ ಕಾಲ ನಿಂತದ್ದು ನನ್ನ ಕುತೂಹಲಕ್ಕೆ ಕಾರಣವಾಯಿತು. ಯಾವುದೇ ಕಾರಣಕ್ಕೂ ನಡಿಗೆಯನ್ನು ನಿಲ್ಲಿಸದ ನಾನು ಗೇಟಿನೊಳಗಿನಿಂದಲೇ ನೋಡಿದಾಗ 60ರ ಆಸು ಪಾಸಿನ ವಯೋವೃದ್ಧನೊಬ್ಬನಿಗೆ ಬಸ್ಸಿನಲ್ಲಿದ್ದ ಬೇರೆ ಪ್ರಯಾಣಿಕರ ಸಹಾಯದಿಂದ ಹಸಿ ಮೆಣಸಿನಕಾಯಿಯನ್ನು ತುಂಬಿದ ಮೂರು ದೊಡ್ಡ ಚೀಲಗಳನ್ನು ಕೆಳಗಿಳಿಸಿ ಕೆಲವೇ ಸೆಕೆಂಡುಗಳಲ್ಲಿ ಆ ಬಸ್ಸು ಹೊರಟು ಹೋಯಿತು.

ತುಸು ಸೋಜಿಗದಿಂದಲೇ ಮನಸ್ಸಿನಲ್ಲಿ ಎಷ್ಟು ಒಳ್ಳೆಯ ಕೆಲಸ ಎಂದು ಯೋಚಿಸಿದೆ, ಜೊತೆಗೆ ವಯಸ್ಸಾದ ಅಜ್ಜ ಆ ಮೂರು ಚೀಲಗಳನ್ನು ಕೇವಲ ಅರವತ್ತೆಪ್ಪತ್ತು ಅಡಿ ದೂರದಲ್ಲಿರುವ ತರಕಾರಿ ಮಾರುಕಟ್ಟೆಗೆ ಹೇಗೆ ಒಯ್ಯುತ್ತಾನೆ ಎಂಬ ಕುತೂಹಲ ನನ್ನಲ್ಲಿ ಮೂಡಿತ್ತು. ಅಕಸ್ಮಾತ್ ಒಂದೊಂದೇ ಚೀಲವನ್ನು ಕೊಂಡೊಯ್ದು ಹಾಕಿ ಬರುವಾಗ ಯಾರಾದರೂ ಒಂದು ಚೀಲವನ್ನು ಲಪಟಾಯಿಸಿದರೆ ಎಂಬ ಅನಿಸಿಕೆ ಮೂಡಿ ನನ್ನ ಮರುಳುತನಕ್ಕೆ ನಾನೇ ಮನದಲ್ಲಿ ನಕ್ಕೆ.

ಇದನ್ನು ಕಂಡ ನನಗೆ ಸೋಜಿಗದ ಜೊತೆ ಜೊತೆಗೆ ಅಪಾರ ಸಂತೋಷವಾಯಿತು.



ಮುಂದೆ ಅದರ ಬಗ್ಗೆ ಅಷ್ಟಾಗಿ ತಲೆ ಕೆಡಿಸಿಕೊಳ್ಳದೆ ನನ್ನ ವಾಕಿಂಗ್ ಮುಂದುವರೆಸಿದೆ. ಕೆಲ ನಿಮಿಷಗಳ ನಂತರ ನೋಡಿದಾಗ ಈಗಾಗಲೇ ಎರಡು ಚೀಲಗಳು ತರಕಾರಿ ಮಾರುಕಟ್ಟೆಯನ್ನು ಸೇರಿದ್ದವು. ಮೂರನೇ ಚೀಲವನ್ನು ರಸ್ತೆಯ ಆಚೆ ಬದಿಯಲ್ಲಿರುವ ಸಸಿಗಳನ್ನು ಮಾರುವ ನರ್ಸರಿಯ ವ್ಯಕ್ತಿ ತನ್ನ ಹೆಗಲ ಮೇಲೆ ಹೊತ್ತುಕೊಂಡು ಮಾರುಕಟ್ಟೆಯಲ್ಲಿ ಇಟ್ಟು ಬಂದನು.

ಕಳೆದ ಒಂದು ವರ್ಷದಿಂದ ರಸ್ತೆಯ ಆಚೆ ಬದಿಯಲ್ಲಿರುವ ಕಾಲೇಜಿನ ಆವರಣದ ಹೊರ ಭಾಗಕ್ಕೆ ಅಂಟಿಕೊಂಡಂತೆ ಪುಟ್ಟ ನರ್ಸರಿ ಯನ್ನು ತೆರೆದಿರುವ ಹೊರರಾಜ್ಯದ ಆ ವ್ಯಕ್ತಿಗೆ ಕನ್ನಡ ಭಾಷೆ ಬರುವುದಿಲ್ಲ. ಆತನೊಂದಿಗೆ ವ್ಯವಹರಿಸುವವರು ಕೂಡ ತಮಗೆ ಗೊತ್ತಿರುವ ಹರುಕು ಮುರುಕು ಹಿಂದಿಯಲ್ಲಿ ಮಾತನಾಡುತ್ತಾರೆ. ತನ್ನ ಇಬ್ಬರು ಜೊತೆಗಾರರೊಂದಿಗೆ ಇಲ್ಲಿಯೇ ಇರುವ ಆತ ತನ್ನ ನರ್ಸರಿಗೆ ಬೇಕಾಗುವ ನೀರನ್ನು ಪಕ್ಕದಲ್ಲಿಯೇ ಇರುವ ಪೆಟ್ರೋಲ್ ಬಂಕ್ ನಿಂದ ಪಡೆಯುತ್ತಾನೆ ಅಲ್ಲಿಯೂ ಕೂಡ ಯಾವುದೇ ಹಣವನ್ನು ಆತನಿಂದ ನಿರೀಕ್ಷಿಸದ ಪೆಟ್ರೋಲ್ ಬಂಕ್ ಮಾಲೀಕರ ಔದಾರ್ಯಕ್ಕೆ ಬದಲಾಗಿ ಆ ಪೆಟ್ರೋಲ್ ಬಂಕಿನ ಪುಟ್ಟ ಉದ್ಯಾನದ ಗಿಡಗಳಿಗೆ ನೀರು ಹಾಕುವುದು, ಸಸಿಗಳನ್ನು ಪಾಲಿಸುವುದನ್ನು ಆತ ಮಾಡುತ್ತಾನೆ. ಮತ್ತೆ ಹಲವಾರು ಬಾರಿ ಪುರಸಭೆಯ ಟ್ಯಾಂಕರ್ನಿಂದ ನೀರನ್ನು ತರಿಸಿಕೊಳ್ಳುತ್ತಾನೆ.

ಭಾಷೆಯೇ ಬಾರದ ಆ ಹಳ್ಳಿಯ ವೃದ್ಧ ವ್ಯಕ್ತಿ ಮತ್ತು ಆತನ ನಡುವೆ ನಡೆದಿರಬಹುದಾದ ಸನ್ನೆಯ ಸಂಭಾಷಣೆಯನ್ನು ಊಹಿಸಿ ವೃದ್ಧನಿಗೆ ನರ್ಸರಿಯ ವ್ಯಕ್ತಿ ಸಹಾಯ ಮಾಡಿದ ಎಂದಾಗ ನನ್ನ ಮನಸ್ಸಿನಲ್ಲಿ ಹಾದು ಹೋದದ್ದು ಮೂಕ ಹಕ್ಕಿಯು ಹಾಡುತಿದೆ ಭಾಷೆಗೆ ನಿಲುಕದ ಭಾವಗೀತೆ ಎಂಬ ಚಲನಚಿತ್ರ ಗೀತೆ.

ಯಾರೂ ಇಲ್ಲದ ನಿರ್ಜನ ರಸ್ತೆಯಲ್ಲಿ ಯಾರೋ ಒಬ್ಬ ವ್ಯಕ್ತಿ ಹೆಣ್ಣು ಮಕ್ಕಳು ಮತ್ತು ಮಕ್ಕಳೊಂದಿಗೆ ನಿಂತಿದ್ದರೆ ಸೌಜನ್ಯಕ್ಕಾಗಿಯಾದರೂ ಏನಾದರೂ ಸಹಾಯ ಬೇಕೆ ಎಂದು ಕೇಳುವುದು ಮತ್ತು ಅಗತ್ಯ ಬಿದ್ದರೆ ಸಹಾಯ ಮಾಡುವುದು, ರಸ್ತೆಯಲ್ಲಿ ನಡೆಯುತ್ತಿರುವಾಗ ಆಕಸ್ಮಿಕ ಅಪಘಾತ ಸಂಭವಿಸಿ ಎಚ್ಚರ ತಪ್ಪಿ ಬಿದ್ದ ವ್ಯಕ್ತಿಯನ್ನು ಉಪಚರಿಸುವುದು, ಸಂತೆಯಲ್ಲಿ ಕಳೆದು ಹೋದ ಮಗುವನ್ನು ಸುರಕ್ಷಿತವಾಗಿ ಪಾಲಕರಿಗೆ ತಲುಪುವಂತೆ ಮಾಡಲು ಆ ಮಗುವನ್ನು ಪೊಲೀಸರ ಸುಪರ್ದಿಗೆ ಒಪ್ಪಿಸುವುದು ಇಂತಹ ಹತ್ತು ಹಲವಾರು ಕೆಲಸಗಳು ಮಾನವೀಯ ಹಿನ್ನೆಲೆಯಲ್ಲಿ ಅದ್ಭುತ ಕಾರ್ಯಗಳೆನಿಸುತ್ತವೆ. ಎಷ್ಟೋ ಬಾರಿ ಈ ರೀತಿ ತ್ವರಿತ ಕಾರ್ಯನಿರ್ವಹಣೆಯು ವ್ಯಕ್ತಿಯ ಜೀವವನ್ನು ಉಳಿಸುತ್ತದೆ.

ಅದೆಷ್ಟು ಚಂದ ಅಲ್ಲವೇ





ಸ್ನೇಹಿತರೆ, ಮಾತೆ ಬಾರದೆ ಕೇವಲ ಮೌನ ಸಂಭಾಷಣೆ ಇಲ್ಲವೇ ಸನ್ನೆಗಳ ಮೂಲಕ ಪರಸ್ಪರ ನೆರವಾಗುವುದು ಭಾವಗಳನ್ನು ಅರಿಯುವುದು ಮನುಷ್ಯ ಮನುಷ್ಯರ ನಡುವಿನ ಬಾಂಧವ್ಯಕ್ಕೆ ಉತ್ತಮ ವೇದಿಕೆಯಾಗಬಲ್ಲದು. ಇಂತಹ ಸಮಯಗಳಲ್ಲಿ ಯಾರು ಯಾರದೇ ಜಾತಿ ಮತ ಪಂಥವನ್ನು ಕೇಳದೆ ಸಹಾಯ ಮಾಡುವುದೇ ವಿಶ್ವಮಾನವ ಧರ್ಮ. ಅದು ನಮ್ಮ ನಿಮ್ಮೆಲ್ಲರಲ್ಲಿಯೂ ಅಂತರ್ಗತವಾಗಿದೆ. ಇಲ್ಲದ ತೊಂದರೆಗಳಿಗೆ ಈಡು ಮಾಡುತ್ತದೆ ಎಂಬ ಭಯದಿಂದ ಕೆಲವೊಮ್ಮೆ ಹಿಂಜರಿದರೂ ಪ್ರಸ್ತುತ ಜಗತ್ತಿನಲ್ಲಿ ಈ ಮಾನವೀಯ ನೆಲೆಯ ಅಗತ್ಯತೆ ಹಿಂದೆಂದಿಗಿಂತಲೂ ಹೆಚ್ಚಾಗಿದೆ.

ಅಂತಹ ಮಾನವೀಯ ಪ್ರಜ್ಞೆಯನ್ನು ನಾವೆಲ್ಲರೂ ಹೊಂದುವ. ಆ ಮೂಲಕ ಆಧ್ಯಾತ್ಮ ಭಾರತದ ಔನ್ನತ್ಯಕ್ಕೆ ಕಾರಣರಾಗೋಣ.

# ಚಿಮ್ಮಡದಲ್ಲಿ ಸುರಿದ ಬಿರುಮಳೆಗೆ ಭಕ್ತರ ಪರದಾಟ



**ಉದಯರಶ್ಮಿ ನ್ಯೂಸ್**

ಚಿಮ್ಮಡ: ಮಂಗಳವಾರ ರಾತ್ರಿ ಸುರಿದ ಜೋರು ಮಳೆಯಿಂದ ಈ ಭಾಗದ ವಾತಾವರಣ ತಂಪೆರೆದಂತಾಗಿದ್ದು ರೈತರು ಹರ್ಷವ್ಯಕ್ತಪಡಿಸಿದ್ದಾರೆ. ಆದರೆ ಗ್ರಾಮದಲ್ಲಿ ನಡೆಯುತ್ತಿರುವ ಮೂರು ಮುಖದವ್ವದೇವಿ ಜಾತ್ರೆಗೆ ಆಗಮಿಸಿದ ಭಕ್ತರು ಹೈರಾಣಾಗಿದ್ದಾರೆ.

ರಾತ್ರಿ 8.00ಘಂ. ಯಿಂದ ಸುಮಾರು 3 ಘಂ.ಗಳ ಕಾಲ ಸುರಿದ ಮಳೆಯಿಂದಾಗಿ ಗ್ರಾಮದಲ್ಲಿ ಮೂರು ವರ್ಷಗಳಿಗೊಮ್ಮೆ ನಡೆಯುವ ಬ್ರಹತ್ ಜಾತ್ರೆ ಅಸ್ತವ್ಯಸಥ-ಗೊಂಡಿದೆ, ಎತ್ತಿನಬಂಡಿ, ಟ್ರ್ಯಾಕ್ಟರ್ ಮುಂತಾದ ವಾಹನಗಳಲ್ಲಿ ಅಡುಗೆ ಸಾಮಗ್ರಿಗಳೊಂದಿಗೆ ಆಗಮಿಸಿದ ಸಾವಿರಾರು ಜನ ಭಕ್ತಾಧಿಗಳು ಈ ಅಕಾಲಿಕ ಮಳೆಯಿಂದ ಪರಿತಪಿಸುವಂತಾಯಿತು. ಅವರ ವಸತಿಗಾಗಿ ಹಾಕಿದ ಶಾಮಿಯಾನ ಕಿತ್ತು ಹೋದ ಪರಿಣಾಮ ಭಕ್ತರು ಶಾಲೆ, ಮಠ, ಮಂದಿರಗಳಲ್ಲಿ ಆಶ್ರಯ ಪಡೆದರು, ರಾತ್ರಿಯಿಡೀ ವಿದ್ಯುತ್ ಸಂಪರ್ಕ ಕಡಿತಗೊಂಡಿದ್ದರಿಂದ ಸೊಳ್ಳೆಗಳ ಕಾಟದಿಂದಾಗಿ ಗ್ರಾಮಸ್ಥರು ಜಾಗರಣೆ ಮಾಡುವಂತಾಯಿತು,

ಆದರೆ ವ್ಯಾಪಾರಿಗಳು ನಮಗೆ ಹಾನಿಯಾದರೂ ಪರವಾಗಿಲ್ಲ ಮಳೆಯಾಗಿದ್ದು ತುಂಬಾ ಖುಷಿಯಾಗಿದೆ, ಮೂರುಮಕದವ್ವ ಈ ಮಳೆ ಮೂಲಕ ನಮಗೆಲ್ಲ ಆಶೀರ್ವದಿಸಿದ್ದಾರೆಂದು ವ್ಯಾಪಾರಿ ಮಂಜುನಾಥ ತೊರವಿ ಅಭಿಪ್ರಾಯ ವ್ಯಕ್ತಪಡಿಸಿದರು.

ಕಳೆದ ಹಲವು ದಿನಗಳಿಂದ ಈ ಭಾಗದಲ್ಲಿ ಮಳೆಯಿಲ್ಲದೇ ಹಲವಾರು ಕೊಳವೆ ಬಾವಿಗಳು ಕೈಕೊಟ್ಟಿದ್ದರ ಪರಿಣಾಮ ಈ ಭಾಗದಲ್ಲಿ ಹಲವೆಡೆ ಜನ ಜಾನುವಾರುಗಳಿಗೆ ಕುಡಿಯುವ ನೀರಿಗಾಗಿ ಪರದಾಡುವಂತಾಗಿ-ತ್ತು ರಾತ್ರಿ ಸುರಿದ ಮಳೆಯಿಂದ ವಾತಾವರಣ ತಂಪಾಗಿದ್ದು ಅಂತರ್ಜಲ ಮಟ್ಟ ಹೆಚ್ಚುವ ಸಾಧ್ಯತೆಯಿದೆಯಂದು ಹಲವಾರು ರೈತರು ಅಭಿಪ್ರಾಯ ಪಡುತ್ತಾರೆ.

ಒಟ್ಟಾರೆ ಈ ಭಾಗದಲ್ಲಿ ಸುರಿದ ಕೃತಿಕಾ ಮಳೆಗೆ ಸಾರ್ವಜನಿಕರು ರೈತರು ಖುಷಿಯಾಗಿದ್ದು ತಮ್ಮ ಬಿತ್ತನೆ ಕಾರ್ಯಕ್ಕೆ ಭುಮಿಯನ್ನು ಹದಗೊಳಿಸಿ ಮಳೆಗಾಗಿ ಕಾಯುತಿದ್ದ ರೈತರಿಗೆ ಈ ಮಳೆ ವರದಾನವಾಗಿದೆ.

# ಲಿಂ.ಶಿವಲಿಂಗೇಶ್ವರರು ಬಸವನಾಡಿನಲ್ಲಿ ಸದಾ ಪ್ರಾತ:ಸ್ಮರಣಿಯರು

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ವಿರಕ್ತಮಠದ ಲಿಂ.ಶಿವಲಿಂಗೇಶ್ವರರ ಕತೃತ್ವ ಶಕ್ತಿ ಅಗಾಧವಾಗಿದೆ. ಇಂತಹ ಪೂಜ್ಯರು ಬಸವನಾಡಿನಲ್ಲಿ ಸದಾ ಪ್ರಾತ:ಸ್ಮರಣಿಯರಾಗಿದ್ದರೆ ಎಂದು ಹಿರೇಮಠದ ಶಿವಪ್ರಕಾಶ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಪಟ್ಟಣದ ವಿರಕ್ತಮಠದಲ್ಲಿ ಬುಧವಾರ ಬಸವಜಯಂತಿ ಆಚರಣೆ ಹಾಗೂ ಶಿವಲಿಂಗೇಶ್ವರ ಶಿವಯೋಗಿಗಳ ಪುಣ್ಯಾರಾಧನೆ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ವಿರಕ್ತ ಪರಂಪರೆಯಲ್ಲಿ ಅಗಾಧವಾದ ಶಕ್ತಿ ಇದೆ. ಮನೆಯಲ್ಲಿ ಮಗು ಅಳುತ್ತಿದ್ದರೆ ಆ ಮಗುವನ್ನ ವಿರಕ್ತಮಠದಲ್ಲಿರುವ ಶಿವಲಿಂಗೇಶ್ವರರ ಗದ್ದುಗೆಯ ಮುಂದೆ ಹಾಕಿ ಶ್ರೀಗಳ ಪ್ರಸಾದ ಹಣೆಗೆ ಹಚ್ಚಿದರೆ ಸಾಕು ಮಗು ಅಳುವನ್ನು ನಿಲ್ಲಿಸುತ್ತಿತ್ತು ಎಂದರೆ ಶಿವಲಿಂಗೇಶ್ವರ ಶಿವಯೋಗಿಗಳು ಎಂತಹ ಮಹಾನ್ ತಪಸ್ವಿಗಳಾಗಿದ್ದರು ಎನ್ನುವುದನ್ನು ನಾವೆಲ್ಲರು ಅರಿತುಕೊಳ್ಳಬೇಕೆಂದರು.

ವಿರಕ್ತ ಪರಂಪರೆಯಲ್ಲಿ



ಸಾಕಷ್ಟು ಶರಣರು ಇಂತಹ ಶಕ್ತಿಯನ್ನ ಪಡೆದಿದ್ದರು. ಮಠಕ್ಕೆ ಬಂದ ಭಕ್ತರಿಗೆ ಯಂತ್ರವನ್ನು ಕಟ್ಟಿ ಅವರ ದು:ಖವನ್ನು ದೂರ ಮಾಡುವ ಶಕ್ತಿಯನ್ನು ಸಿದ್ದಗಂಗಾ ಮಠದ ಲಿಂ. ಡಾ. ಶಿವಕುಮಾರ ಸ್ವಾಮೀಜಿ ಹೊಂದಿದ್ದರು. ಅದೇ ರೀತಿಯಲ್ಲಿ ಅಗಾದ ಶಕ್ತಿ ಪಡೆದ ಶಿವಲಿಂಗೇಶ್ವರ ಶಿವಯೋಗಿಗಳು ಕಷ್ಟ ಅಂತ ಬಂದವರ ಕಷ್ಟವನ್ನು ಪರಿಹರಿಸುತ್ತಿದ್ದರು. ಈಗಾಗಲೇ ಅವರ ಚರಿತ್ರೆ ಪುಸ್ತಕ ರೂಪದಲ್ಲಿ ಲೋಕಾರ್ಪಣೆಗೊಂಡಿದೆ. ಮುಂಬರುವ ದಿನಗಳಲ್ಲಿ ಶಿವಲಿಂಗೇಶ್ವರರ ಪುರಾಣವನ್ನು ಶ್ರೀಮಠದ ಪೂಜ್ಯರು ಬರೆಸಿದರೆ ನಾಡಿನುದ್ದಕ್ಕೂ ಎಲ್ಲರೂ ಅದನ್ನ ಕೇಳಿ ಪಾವನರಾಗುತ್ತಾರೆ ಎಂದರು.

ಸಾಹಿತಿ ಲ.ರು. ಗೊಳಸಂಗಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, 12ನೇ ಶತಮಾನದ ವಿಶ್ವಗುರು ಬಸವೇಶ್ವರ ತತ್ವ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡ ಶಿವಲಿಂಗೇಶ್ವರ ಶಿವಯೋಗಿಗಳು ಬಸವೇಶ್ವರರ ತತ್ವ ಆದರ್ಶಗಳನ್ನ ಜಾರಿಗೆ ತರುವಲ್ಲಿ ಪ್ರಾಮಾಣಿಕವಾಗಿ ಶ್ರಮಿಸಿದ್ದರು. ಅಗಾಧ ಶಕ್ತಿಯನ್ನು ಹೊಂದಿರುವ ಶಿವಯೋಗಿಗಳು ಸಾಕಷ್ಟು ಪವಾಡಗಳನ್ನು ಮಾಡಿದ್ದರು. ಕಾಯಕ ದಾಸೋಹಕ್ಕೆ ಮಹತ್ವ ನೀಡಿದ ಶಿವಯೋಗಿಗಳು ಬಾಗೇವಾಡಿಯ ಭಾಗ್ಯವಾಗಿದ್ದರು ಎಂದರು.

ರಾಜ್ಯ ಸಹಕಾರಿ ಮಹಾಮಂಡಳ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ ಮಾತನಾಡಿ, ದಾನಗಳಲ್ಲಿ ಶ್ರೇಷ್ಠ ದಾನ ರಕ್ತ ದಾನ ಶಿವಯೋಗಿಗಳ ಪುಣ್ಯರಾಧಾನೆ ನಿಮಿತ್ಯ ಸಾಕಷ್ಟು ಯುವಕರು ಸ್ವಯಂ ಪ್ರೇ-ರಿತವಾಗಿ ರಕ್ತದಾನ ಮಾಡಲು ಮುಂದಾಗುತ್ತಿರುವ ಕಾರ್ಯ ಶ್ಲಾಘನೀಯ. ಸಮಾಜಕ್ಕಾಗಿ ಶ್ರಮಿಸಿದವರಿಗೆ ಸಾವಿಲ್ಲ. ಸಮಾಜಕ್ಕಾಗಿ ದುಡಿದವರು ಅಜರಾಮರವಾಗುತ್ತಾರೆ ಎನ್ನುವುದಕ್ಕೆ ಶಿವಲಿಂಗೇಶ್ವರ ಶ್ರೀಗಳು ಸಾಕ್ಷಿಯಾಗಿದ್ದಾರೆ ಎಂದರು.

ಶಿಕ್ಷಕ ಎಚ್.ಬಿ.ಬಾರಿಕಾಯಿ ಉಪನ್ಯಾಸ ನೀಡಿದರು. ಸಾನಿಧ್ಯವನ್ನು ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ವಹಿಸಿದ್ದರು. ಮುಖಂಡರಾದ ಶಿವನಗೌಡ ಬಿರಾದಾರ, ಶಿವಾನಂದ ಈರಕಾರ ಮುತ್ಯಾ, ಡಾ, ಸುನೀಲ ಚವ್ಹಾಣ, ಬಸವರಾಜ ಹಾರಿವಾಳ, ಬಸಣ್ಣ ದೇಸಾಯಿ, ಮುರಗೆಪ್ಪ ಚಿಂಚೋಳಿ, ರವಿ ಚಿಕ್ಕೊಂಡ ಇತರರು ಇದ್ದರು. ಮಹಾಂತೇಶ ಆದಿಗೊಂಡ ಸ್ವಾಗತಿಸಿದರು. ಕೊಟ್ರೇಶ ಹೆಗಡ್ಯಾಳ ನಿರೂಪಿಸಿ, ವಂದಿಸಿದರು.

ಇದೇ ಸಂದರ್ಭದಲ್ಲಿ ಶಿವಲಿಂಗೇಶ್ವರ ಶಿವಯೋಗಿಗಳ ಪುಣ್ಯಾರಾಧನೆಯಂಗವಾಗಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರದಲ್ಲಿ ಶ್ರೀಮಠ ಪೂಜ್ಯರು ಸೇರಿದಂತೆ ವಿವಿಧ ಜನರು ರಕ್ತದಾನ ಮಾಡಿದರು.

# ಮೇ.31ರಂದು ನೈರುತ್ಯ ಮುಂಗಾರು ಕೇರಳ ಪ್ರವೇಶ ಸಾಧ್ಯತೆ

**ಉದಯರಶ್ಮಿ ನ್ಯೂಸ್**

ನವದೆಹಲಿ: ನೈಋತ್ಯ ಮುಂಗಾರು ಮೇ 31 ರಂದು ಕೇರಳ ಪ್ರವೇಶಿಸುವ ಸಾಧ್ಯತೆಯಿದೆ. ಇದು ಕೃಷಿ ಆಧಾರಿತ ಭಾರತದ ಆರ್ಥಿಕತೆಗೆ ನಿರ್ಣಾಯಕವಾದ ನಾಲ್ಕು ತಿಂಗಳ ಮಳೆಗಾಲಕ್ಕೆ ವೇದಿಕೆಯಾಗಿದೆ. ಈ ಬಾರಿ ನೈರುತ್ಯ ಮುಂಗಾರು ನಾಲ್ಕು ದಿನ ಏರು ಪೇರಾಗುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆ ಬುಧವಾರ ತಿಳಿಸಿದೆ.

ಇದು ಮುಂಚೆಯೇ ಅಲ್ಲ. ವಾಡಿಕೆ ದಿನಾಂಕದ ಸಮೀಪದಲ್ಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮಹಾನಿರ್ದೇಶಕ ಮೃತ್ಯುಂಜಯ್ ಮೊಹಾಪಾತ್ರ ಹೇಳಿದ್ದಾರೆ.

ಖಒಆ ದತ್ತಾಂಶದ ಪ್ರಕಾರ ಕೇರಳದಲ್ಲಿ ಮುಂಗಾರು ಆರಂಭದ ದಿನಾಂಕ ಕಳೆದ 150 ವರ್ಷಗಳಲ್ಲಿ ವ್ಯಾಪಕವಾಗಿ ಬದಲಾಗಿದೆ ಮೇ 11, 1918 ರಂದು ಬೇಗನೆ ಪ್ರವೇಶಿಸಿತ್ತು. ಜೂನ್ 18, 1972 ರಂದು ಹೆಚ್ಚು ವಿಳಂಬವಾಗಿತ್ತು.



ಕಳೆದ ವರ್ಷ ಜೂನ್ 8 ರಂದು, 2022 ರಲ್ಲಿ ಮೇ 29 ರಂದು ದಕ್ಷಿಣ ರಾಜ್ಯಗಳಲ್ಲಿ ಮಳೆಗಾಲದ ಪರಿಸ್ಥಿತಿ ಆರಂಭವಾಗಿತ್ತು. ಈ ಬಾರಿ ಸಾಧಾರಣಕ್ಕಿಂತ ಹೆಚ್ಚಿನ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

# ಕೂಲಿಕಾರರಿಗೆ ಅನುಕೂಲಕರವಾದ ಕೂಸಿನ ಮನೆ :ಸಿಡಿಪಿಓ ಮ್ಯಾಗೇರಿ

**ಉದಯರಶ್ಮಿ ನ್ಯೂಸ್**

ತಿಕೋಟಾ: ತಾಲೂಕು ವ್ಯಾಪ್ತಿಯ ಲೋಹಗಾಂವ, ಬಾಬಾನಗರ, ಕನಮಡಿ ಮತ್ತು ಹೊನವಾಡ ಗ್ರಾಮದಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದಲ್ಲಿ ಆರಂಭಿಸಲಾದ ಕೂಸಿನ ಮನೆಗಳಿಗೆ ನೂಡಲ್ ಅಧಿಕಾರಿಗಳು ಹಾಗೂ ವಿಜಯಪುರದ ಶಿಶು ಅಭಿವೃದ್ಧಿ ಯೋಜನಾಧಿಕಾರಿ (ಗ್ರಾ), ಎಸ್.ಸಿ.ಮ್ಯಾಗೇರಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಂತರ ಮಾತನಾಡಿದ ಅವರು ಮಹಾತ್ಮ ಗಾಂಧಿ ನರೇಗಾ ಯೋಜನೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಯೋಗದಲ್ಲಿ ಆರಂಭಿಸಲಾದ ಕೂಸಿನ ಮನೆಗಳು ಗ್ರಾಮೀಣ



ಭಾಗದ ಜನರಿಗೆ ತುಂಬಾ ಅನುಕೂಲಕರವಾಗಿವೆ. ಗ್ರಾಮೀಣ ಭಾಗದ ಜನರು ತಮ್ಮ 03 ವರ್ಷದೊಳಗಿನ ಮಕ್ಕಳನ್ನು ಈ ಕೇಂದ್ರದಲ್ಲಿ ಬಿಟ್ಟು ನಿಶ್ಚಿಂತೆಯಿಂದ ಕೂಲಿ ಕೆಲಸಕ್ಕೆ ತೆರಳಲು ಈ ಕೇಂದ್ರಗಳು ಸಹಕಾರಿಯಾಗಿವೆ. ಈ ಕೇಂದ್ರದಲ್ಲಿ ಮಕ್ಕಳಿಗೆ ಆಟ ಪಾಠದ ಜೊತೆಗೆ ಪೌಷ್ಠೀಕ ಆಹಾರವನ್ನು ಒದಗಿಸಲಾಗುತ್ತಿದೆ ಎಂದರು.

ಶ್ರೀಮತಿ ಶೋಭಕ್ಕ ಶಿಳೀನ, ಸಹಾಯಕ ನಿರ್ದೇಶಕರು (ಗ್ರಾಉ&ಪಂರಾ) ತಾಲೂಕು ಪಂಚಾಯತಿ ತಿಕೋಟಾ ಅವರು ಮಾತನಾಡಿ ತಿಕೋಟಾ ತಾಲೂಕಿನಾದ್ಯಂತ 10 ಕೂಸಿನ ಮನೆಗಳು ಮಂಜೂರಾಗಿದ್ದು ಸರಕಾರದ ನಿರ್ದೇಶನದಂತೆ ಎಲ್ಲಾ ಕೇಂದ್ರಗಳನ್ನು ಆರಂಭ ಮಾಡಲಾಗಿದೆ. ಮತ್ತು ಕೇಂದ್ರದ ಆರೈಕೆದಾರರು ಸಮೀಕ್ಷೆ ಮಾಡಿ ಮಕ್ಕಳನ್ನು ದಾಖಲು ಮಾಡಿಕೊಳ್ಳುತ್ತಿದ್ದು, ಮುಂದಿನ ದಿನದಲ್ಲಿ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಮಕ್ಕಳನ್ನು ಈ ಕೇಂದ್ರಗಳಲ್ಲಿ ದಾಖಲು ಮಾಡಲು ಕ್ರಮ ವಹಿಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾ-ರಿಗಳಾದ ವ್ಹಿ.ಕೆ.ಹೊಸಮನಿ, ಪಂಚಾಯತಿ ಅಭಿವೃದ್ಧಿ ಅಧಿಕಾ-ರಿಗಳಾದ ಶ್ರೀ ಸುರೇಶ ಕಳ್ಳಿಮನಿ, ಶ್ರೀಮತಿ ಪದ್ಮಿನಿ ಬಿರಾದಾರ, ಶ್ರೀಮತಿ ರೇಣುಕಾ ಸೋಲಾಪುರ, ಶ್ರೀ ಮಹೇಶ ಕಗ್ಗೊಡದವರ, ತಾಲೂಕು ಐಇಸಿ ಸಂಯೋಜಕ ಕಲ್ಲಪ್ಪ ನಂದರಗಿ, ಕೂಸಿನ ಮನೆ ಆರೈಕೆದಾರರು, ಗ್ರಾಮ ಪಂಚಾಯತಿ ಸಿಬ್ಬಂದಿ ಸೇರಿ ಇತರರು ಹಾಜರಿದ್ದರು.

# ಹೂವಿಗೆ ನೀರಿದ್ದಂತೆ ಸುಂದರ ಬದುಕಿಗೆ ಪ್ರಯತ್ನ

**ಉದಯರಶ್ಮಿ ದಿನಪತ್ರಿಕೆ**



**ಜಯ್ ನುಡಿ**

● ಜಯಶ್ರೀ.ಜೆ.ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು, ಬೆಳಗಾವಿ
9449234142

ದೊಡ್ಡ ಕಂಪನಿಯ ವ್ಯವಸ್ಥಾಪಕನೊಬ್ಬ ನಿವೃತ್ತನಾದ. ಆತನಿಗೆ ವಿದಾಯ ಕೂಟವನ್ನು ಏರ್ಪಡಿಸಲಾಗಿತ್ತು. ಆತ ಹೊಸ ವ್ಯವಸ್ಥಾಪಕನಿಗೆ ಎರಡು ಲಕೋಟೆಗಳನ್ನು ಕೊಟ್ಟ. ಕಂಪನಿಯಲ್ಲಿ ಪರಿಹ-ರಿಸಲಾಗದಂಥ ಬಿಕ್ಕಟ್ಟು ತಲೆದೋರಿದಾಗ ಮೊದಲನೇ ಲಕೋಟೆ ತೆರೆ. ಮುಂದಿನ ಬಿಕ್ಕಟ್ಟು ಬಂದಾಗ ಎರಡನೇ ಲಕೋಟೆ ಒಡೆದು ನೋಡು ಎಂದು ಹೇಳಿದ. ಕೆಲ ಕಾಲದ ನಂತರ ಬಿಕ್ಕಟ್ಟು ಉಂಟಾದಾಗ ಮೊದಲನೇ ಲಕೋಟೆ ತೆರೆದ. 'ಈ ಬಿಕ್ಕಟ್ಟಿಗಾಗಿ ಮೊದಲಿಗಿದ್ದ ವ್ಯವಸ್ಥಾಪಕನನ್ನು




ದೂರು.' ಎಂದು ಆ ಚೀಟಿಯಲ್ಲಿ ಬರೆದಿತ್ತು. ಕೆಲ ವರ್ಷಗಳ ನಂತರ ಮತ್ತೊಂದು ಬಿಕ್ಕಟ್ಟು ಎದುರಾಯಿತು. ಆಗ ಎರಡನೇ ಲಕೋಟೆ ತೆರೆದ. 'ನಿನ್ನ ಮುಂದಿನ ವ್ಯವಸ್ಥಾಪಕನಿಗೆ ಎರಡು ಲಕೋಟೆ ಸಿದ್ಧಪಡಿಸು.' ಎಂದು ಬರೆದಿತ್ತು. ಪ್ರಯತ್ನ ಪಡದವರು ಮತ್ತೊಬ್ಬರ ಮೇಲೆ ದೋಷಾರೋಪಣೆ ಮಾಡುವುದನ್ನೇ ಕಾಯಕವಾಗಿಸಿ ಕೊಂಡಿರುತ್ತಾರೆ ಎನ್ನುವ ದಿವ್ಯ ಸಂದೇಶವನ್ನು ಈ ದೃಷ್ಟಾಂತ ಸಾರುತ್ತದೆ.

ಉತ್ಸಾಹದಿ ಒಂದು ಅಡಿ ಇಡಿ

ಬದುಕಿನ ಹಕ್ಕಿಗೆ ಕನಸಿನ ರೆಕ್ಕೆಗಳನ್ನು ಕಟ್ಟಿ ಮುಗಿಲಿನಲ್ಲಿ ಹಾರಲು ಬಿಡುವುದು ಚೆಂದ. ಆದರೆ ಹಾಗೆ ಹಾರುವ ಮುಗಿಲ ಹಕ್ಕಿ ಕಂಡು ಮನಸ್ಸು ಗುಸು ಗುಸು ಪಿಸು ಪಿಸು ಎಂದು ಶುರು ಹಚ್ಚಿಕೊಳ್ಳುತ್ತದೆ. ನಿನ್ನಿಂದಾಗದು ಎಂದು ಮುಂದಿಟ್ಟ ಹೆಜ್ಜೆಯನು ಹಿಂದಿಡುವಂತೆ ಮಾಡುವಲ್ಲಿ ಗೆದ್ದು ಬಿಡುತ್ತದೆ. ಪಕ್ಕದವರು ಏರಿದ ಎತ್ತರ ಕಂಡು, ನಾನು ಅಂದು ದುರ್ಬಲ ಮನಸ್ಸಿನ ಮಾತು ಕೇಳಿರದಿದ್ದರೆ ಇಂದು ಅವರಂತೆ ಬಾನೆತ್ತರದಲ್ಲಿ ವಿಹರಿಸುತ್ತಿದ್ದೆ. ಎಂದು ಗೋಳಾಡುತ್ತೇವೆ. ಅಲ್ಲ, ಒಮ್ಮೆ ಪ್ರಯತ್ನ ಪಟ್ಟು ನೋಡುವುದರಲ್ಲಿ ತಪ್ಪೇನಿದೆ? ಎಂದು ಉತ್ಸಾಹದಿ ಒಂದು ಅಡಿ ಮುಂದಿಟ್ಟರೆ ಅದರ ಫಲವೇ ಬೇರೆ ಆಗಿರುತ್ತದೆ. ಪ್ರಯತ್ನ ಮಾಡದೇ ಚಂಚಲ ಮನಸ್ಸನ್ನು ಅನುಸರಿಸಿದರೆ, ಮುಕ್ತ ಜೀವನ ಬಯಸಿದರೆ, ಬದುಕು ಮೂರಾಬಟ್ಟೆ ಆಗುವುದು ಖಂಡಿತ.

ಕಣ್ಣಂದಾಜು ಬಿಡಿ



ಪ್ರಯತ್ನದ ಹಾದಿಯಲ್ಲಿರುವವರ ಬದುಕಿನ ಹಣತೆ ಉರಿಯುವುದನ್ನು ನೋಡುವ ಸೊಬಗೇ ವಿಶೇಷ. ಕಂಡದ್ದನ್ನು ಬಯಸುತ್ತದೆ ಕಣ್ಣು. ಸೋಮಾರಿ ಮನಸ್ಸು ದೂರದಿಂದಲೇ ಅಳತೆ ಹಾಕಿ ಅದು ನಿನ್ನ ಕೈಯಿಂದಾಗದೆಂದು ಬೈದು ಕುಳ್ಳರಿಸುತ್ತದೆ. ನಮ್ಮ ಬದುಕಿನ ಬಹುತೇಕ ನಿರ್ಧಾರಗಳು ಹೀಗೇ ಕಣ್ಣಂದಾಜಿನಲ್ಲೇ ಆಗಿ ಹೋಗುತ್ತವೆ. ಎಲ್ಲವನ್ನೂ ಬಲ್ಲವರಂತೆ ಅಳೆಯುವ ಹುಂಬ ಮನಸ್ಥಿತಿ ನಮ್ಮದು. ಮೂಲಭೂತವಾಗಿ ದೃಢ ಚಿತ್ತ, ಹದವಾದ ಪ್ರಯತ್ನ ಉನ್ನತ ಮಟ್ಟದ ಅಭಿಲಾಷೆ ಬೇಕು. ಕರ್ಮಗಳಿಗೆ ದೇವರು ಪ್ರಯತ್ನದೆಡೆಗೆ ಬೆರಳು ತೋ-ರಿದ್ದಾನೆ. ಬುದ್ಧ ಬಸವ ಕ್ರಿಸ್ತರಂಥ ದಾರಿ ತೋರುವ ಗುರುಗಳನ್ನು ಮುಂದಿಟ್ಟಿದ್ದಾನೆ. ಪ್ರಯತ್ನ ಮಾರ್ಗವೊಂದೇ ಫಲದ ಆಸ್ತಿ ಎಂಬುದು ನಿರ್ವಿವಾದ. ಪ್ರಯತ್ನಿಸಿ ಸೋಲುವುದು ತಪ್ಪಲ್ಲ. ಪ್ರಯತ್ನಿಸದೇ ಇರುವುದು ತಪ್ಪು. ಹೆಬ್ಬಯಕೆಗಳ ಹಾದಿಯಲ್ಲಿ ಹೆಜ್ಜೆ ಇಡುವ ಮುನ್ನ ಮನಸ್ಸನ್ನು ತೆರೆದಿಡಿ. ನಾನೇನುಂಬುದನ್ನು ಅರ್ಥ ಮಾಡಿಕೊಳ್ಳಿ. ಆಗ ನಾವು ಊಹಿಸಿರದ ರೀತಿಯಲ್ಲಿ ವೇಗದ ಗತಿಯಲ್ಲಿ ಮನಸ್ಸು ಸಮರ್ಥವಾಗಿ ನಿರಂತರವಾಗಿ ಪ್ರಯತ್ನದಲ್ಲಿ ತೊಡಗಿಕೊಳ್ಳುತ್ತದೆ.

ಬೇಯಲೇಬೇಕು ಪ್ರಯತ್ನದ ಕುಲುಮೆಯಲ್ಲಿ

ಪ್ರಯತ್ನವೆಂಬ ಕುಲುಮೆಯಲ್ಲಿ ಬೇಯದೇ ಸಮಾಧಾನ ಖುಷಿ ನೆಮ್ಮದಿ ಪಡೆಯುವ ದಾವಂತ ನಮ್ಮದು. ಹೇಗೋ ಮಾಡಿ ನೋವು ಸಾಗು ಹಾಕಿದರೆ ಸಾಕು ಎನ್ನುವ ಮನೋಭಾವ ಕಷ್ಟದ ಗಡಿ ದಾಟುವ ದಾವಂತದಲ್ಲಿ, ಜೀವನದ ಇನ್ನೊಂದು ಬದಿಯಿಂದ ದುಃಖ ತುಂಬಿದ ದೊಡ್ಡದಾದ ಬುಟ್ಟಿಯನ್ನು ಹೊತ್ತು ನಮ್ಮತ್ತಲೇ ಬರುವುದು ತಿಳಿಯುವುದೇ ಇಲ್ಲ. ಪ್ರೀತಿಯಿಂದ ಪ್ರಯತ್ನಿಸುವವರ ಮೊಗದಲ್ಲಿ ಪ್ರಸನ್ನ ಭಾವ. ಅಲ್ಲಿ ಒಂದಿನಿತೂ ಆಯಾಸದ ಸೋಂಕಿಲ್ಲ. ಅಂಥವರ ಬಾಳಲ್ಲಿ ಗೆಲುವಿನ ಸಾಲಂಕೃತ ವೈಭವ. ನೋಡುಗರಿಗೆ ಬೆರಗು ಮೂಡಿಸುತ್ತದೆ. ಪ್ರಯತ್ನವೆಂಬ ಮೆಟ್ಟಿಲು ಬಳಸಿ ತಮಗೆ ಬೇಕಾದ ಹಣ್ಣುಗಳನ್ನೆಲ್ಲ ಸರಸರನೆ ಹೆಕ್ಕಿ ಬುಟ್ಟಿಯಲ್ಲಿ ತುಂಬಿಕೊಳ್ಳುವುದು ನಮ್ಮ ಕಣ್ಣಿಗೆ ಸೂರ್ಯನ ಕಿರಣದಂತೆ ಹೊಳೆಯುತ್ತದೆ. ಅದು ಅವರ ಅದೃಷ್ಟವೆನ್ನುತ್ತೇವೆ. ನಮ್ಮ ದುರಾದೃಷ್ಟಕ್ಕೆ ಕೊರಗುತ್ತೇವೆ. ಪ್ರಯತ್ನದ ಫಲಕ್ಕೆ ಪ್ರಯತ್ನಿಸಿದವರ ಕಂಗಳಲ್ಲಿ ಕೃತಜ್ಞತೆಯ ಮಹಾಪೂರ ಹರಿಯುತ್ತದೆ. ಫಲಗಳು ಪ್ರಯತ್ನಿಸಿದವನ ಭುಜವನ್ನು ಹಿತವಾಗಿ ಅಮುಕಿ ನಿನ್ನೊಂದಿಗೆ ಸದಾ ಇರುವೆ ಹೆದರದಿರು ಎಂದು ಮತ್ತಷ್ಟು ಉಮೇದು ತುಂಬುವವು..

ಸಹಾಯ ಹಸ್ತ ಹಿಡಿ


ಉಸಿರು ಬಿಗಿ ಹಿಡಿದು ಪ್ರತಿ ಹೆಜ್ಜೆಯನ್ನೂ ಪ್ರಯಾಸಮಯವಾಗಿ ಇಡುವುದಕ್ಕಿಂತ ಪ್ರಯತ್ನಿಸುವುದು ಲೇಸಲ್ಲವೇ? ಶುದ್ಧ ಮನಸ್ಸಿನ ಪ್ರಾರ್ಥನೆಗೆ ದೇವರೇ ಒಲಿಯುವನಂತೆ. ಹಾಗಿದ್ದಾಗ ಪ್ರಯತ್ನಕ್ಕೆ ಫಲ ದೊರೆಯುವುದಿಲ್ಲವೇ? ದಟ್ಟ ಕಾಡಿನ ಗೂಡಿಗೆ ಬೆಳಕು ತಲುಪುವುದೇ ತಡ. ಹಾಗೆಯೇ ಸಂತೃಪ್ತ ಜೀವನ ಪಡೆಯಲೇಬೇಕೆನ್ನುವ ಆಂತರ್ಯದ ತುಡಿತ ಇಲ್ಲದಲ್ಲಿ ಪ್ರಯತ್ನವೆಂಬ ದೈವದ ಬೆಳಕು ಬೀಳುವುದೂ ತಡ. ಬದುಕಿನ ಹಾದಿ ಹೆಚ್ಚು ಕಡಿಮೆ ಸವೆದು ಸ್ತಬ್ದವಾಗುವ ಹೊತ್ತಿನಲ್ಲಿ ಪ್ರಯತ್ನ -ಫಲದ ಜ್ಞಾನೋದಯವಾಗುವುದು. ಅನತಿ ದೂರದಲ್ಲಿ ಯಮ ನಿಂತು ಮುಗಳ್ನಗುತ್ತಿರುವಾಗ ಪ್ರಯತ್ನಕ್ಕೆ ಕೈ ಹಾಕಿ ಉಪಯೋಗವಿಲ್ಲ. ಪ್ರಯತ್ನಿಸಲು ಶಕ್ತಿಯೂ ಇಲ್ಲವೆಂದು ಕೈ ಚೆಲ್ಲುವ ಪ್ರಸಂಗ ಎದುರು ನಿಲ್ಲುತ್ತದೆ. ಬದುಕಿನ ಬದಿಯಲ್ಲಿ ನಿಂತ ಪ್ರಯತ್ನವೆಂಬ ಸ್ನೇಹಿತನ ಸಹಾಯ ಹಸ್ತ ಹಿಡಿದು ನಡೆದರೆ ನೋಡು ಬೋಡುತ್ತಿದ್ದಂತೆಯೇ ಜೀವನ ಹೊಸ ವಸಂತ ಮಾಸದ ತಿರುವಿನಲ್ಲಿ ನಗೆ ಚೆಲ್ಲುತ್ತದೆ.

ಸಾಧ್ಯವಿದ್ದಷ್ಟು ಮಾಡಿ

ಇಚ್ಛಾಶಕ್ತಿ ಕತೃತ್ವ ಶಕ್ತಿ ಕ್ರಿಯಾಶೀಲತೆಗಳು ಇದ್ದರೆ ಸಾಲದು ಇವುಗಳೊಂದಿಗೆ ಪರಿಸರ ಪರಿಸ್ಥಿತಿಗಳ ಕುರಿತು ಅವಲೋಕನ ಬೇಕು. ಪ್ರಯತ್ನದ ಮಾರ್ಗದಲ್ಲಿ ಎಡರು ತೊಡರುಗಳಂತೆ ನಿಲ್ಲುವ ಸಮಸ್ಯೆಗಳ ಕುರಿತು ಆಳವಾದ ಚಿಂತನ ಮಂಥನವೂ ಬೇಕು. ಪ್ರಯತ್ನದ ಮೂಲಕ ಹಾದು ಹೋಗುವ ಸಂತೃಪ್ತ ಬದುಕಿನ ಬಸ್ಸಿನ ಮಾಹಿತಿ ಸೋಲೆಂಬ ಗುರು ಚೆನ್ನಾಗಿ ನೀಡಬಲ್ಲ. ಸೋಲು ಅಡೆತಡೆಯಲ್ಲ. ಅದೊಂದು ಮೈಲಿಗಲ್ಲು. ಆತ್ಮ ಬಲ ನೀಡುವ ಸಾಧನ. ಯಾವುದೇ ಸಾಧನೆಗೂ ಆತ್ಮ ಬಲ ಮುಖ್ಯ. ಅಂತಃಶಕ್ತಿಯನ್ನು ಜಾಗೃತಗೊಳಿಸಬಲ್ಲ ಶಕ್ತಿ ಸೋಲಿಗಿದೆ. ಒಳಗಿನ ಶಕ್ತಿಯನ್ನು ಜಾಗೃತಗೊಳಿಸಿ ಪ್ರಯತ್ನದ ಹಾದಿಯಲ್ಲಿ ಮುನ್ನಡೆಯಬೇಕು. 'ನಿನಗೆ ಏನು ಎಷ್ಟು ಸಾಧ್ಯವಿದೆಯೋ ಅಷ್ಟನ್ನು ಮಾಡಿ ಬಿಡು. ಫಲಾಫಲಗಳ ಬಗ್ಗೆ ಚಿಂತೆ ಬಿಡು.' ಎಂದು ಕೃಷ್ಣ ಅರ್ಜುನನಿಗೆ ಭಗವದ್ಗೀತೆಯಲ್ಲಿ ಹೇಳಿದ್ದಾನೆ.

ಯುಕ್ತ ರೀತಿಯಲ್ಲಿ ಉತ್ತರಿಸಿ

ನಿತ್ಯ ಜೀವನದ ಏಕತಾನತೆಯಲ್ಲಿ ಬೇಸತ್ತು ಹೋದ ಮನಸ್ಸಿಗೆ ವಿನೂತನ ಪ್ರಯತ್ನ ಒಂದು ತರದ ಠೇವಣಿ ಇದ್ದ





ಹಾಗೆ. ಮುನ್ನಡೆಸುವ ಇಂಧನ ಇದ್ದ ಹಾಗೆ. ಸಂಬಂಧಗಳ ಸುತ್ತ ಹೆಣೆದಿರುವ ಬದುಕಿನಲ್ಲಿ ಜಗಳ ರಂಪ ರಗಳೆಗಳು ಮನಸ್ತಾಪಗಳು ಸಾಮಾನ್ಯ. ಹಾಗಂತ ಅವುಗಳ ನೆಪದಲ್ಲಿ ಅದೃಷ್ಟದ ಕೈಯಲ್ಲಿ ಜೀವನ ಕೊಟ್ಟು ಪ್ರಯತ್ನ ಮಾಡದಿರುವುದು ತರವಲ್ಲ. ಪ್ರಯತ್ನದ ದಾರಿಯಲ್ಲಿ ಎಷ್ಟೇ ಟೀಕೆಗಳು ಕೇಳಿ ಬಂದರೂ ಕಷ್ಟಗಳು ಎದುರಾದರೂ ತಾಳ್ಮೆ ಕಳೆದುಕೊಳ್ಳದೆ ನಿಭಾಯಿಸುವ ಸಹಿಷ್ಣುತೆಯನ್ನು ಪಡೆಯಬೇಕು. ಎದುರಾಳಿಗಳಂತೆ ಬಲವಾಗಿ ಪ್ರಹಾರ ಮಾಡುವವರಿಗೆ ಮೃದುವಾಗಿ ಮಧುರವಾಗಿ ಯುಕ್ತ ರೀತಿಯಲ್ಲಿ ಉತ್ತರಿಸುವ ಯೋಗ್ಯತೆ ಬೆಳೆಸಿಕೊಳ್ಳಬೇಕು.

ತೋಟಗಾರನು ಗಿಡದ ರೆಂಬೆಗಳನ್ನು ತರಿಯುವಿಕೆಯಿಂದ ಹೇಗೆ ರೆಂಬೆಗಳು ದೃಢವಾಗಿ ಮಾಡುವನೋ ಹಾಗೇ ನಾವೂ ಸಹ ಅನವಶ್ಯಕ ಚಟುವಟಿಕೆಗಳಲ್ಲಿ ಸಮಯ ವ್ಯರ್ಥಗೊಳಿಸುವುದನ್ನು ನಿಲ್ಲಿಸಿ ಉತ್ತಮ ಕಾರ್ಯಗಳೆಡೆಗೆ ಗಮನ ಹರಿಸಬೇಕು. ಬದುಕನ್ನು ಸರಳವಾಗಿಸಿಕೊಳ್ಳುವುದು ಸುಂದರವಾಗಿಸಿಕೊಳ್ಳುವುದು ಒಂದು ಕಲೆ. ಅದೊಂದು ಜಾಣತನ. ಅದು ಪೂರ್ತಿಯಾಗಿ ಶ್ರದ್ಧೆಯಿಂದ ಕೂಡಿದ ಪ್ರಯತ್ನದ ಮೇಲೆ ನಿಂತಿದೆ. ಈ ಜಗತ್ತು ಒಂದು ನಾಟಕ ರಂಗ ಎಂದಿದ್ದಾನೆ ಷೇಕ್ಸ್ಪಿಯರ್ ನಾವೆಲ್ಲ ರಂಗಭೂಮಿಯ ಮೇಲೆ ಪಾತ್ರದಾರಿಗಳು. ರಂಗ ಮಂಚದ ಮೇಲಿದ್ದ ಎಲ್ಲ ಪಾತ್ರದಾರಿಗಳನ್ನು ಜಗತ್ತು ನೆನೆಯುವುದಿಲ್ಲ. ಕಲಾ ಚಾತುರ್ಯದಿಂದ ಬೆವರಿಳಿಸಿ ಶ್ರಮಿಸಿದ ಕಲಾವಿದನನ್ನು ಪ್ರೇಕ್ಷಕರು ಎಂದೂ ಮರೆಯುವುದಿಲ್ಲ. ಪಾತ್ರ ಚಿಕ್ಕದಿರಬಹುದು ದೊಡ್ಡದಿರಬಹುದು ಅದು ಮುಖ್ಯವಲ್ಲ. ಆ ಪಾತ್ರವನ್ನು ಅಭಿನಯಿಸಿದ ಬಗೆ ಜನ ಮಾನಸದಲ್ಲಿ ನೆಲೆ ನಿಲ್ಲುವಂತೆ ಮಾಡುತ್ತದೆ.ಹೂವಿಗೆ ನೀರಿನಂತೆ ಸುಂದರ ಬದುಕಿಗೆ ಪ್ರಯತ್ನ. 'ತನ್ನ ಕೆಲಸದಲ್ಲಿ ಸಾಮಾನ್ಯ ವ್ಯಕ್ತಿ ಶಕ್ತಿ ಸಾಮರ್ಥ್ಯಗಳ ಶೇ 25 ರಷ್ಟನ್ನು ಮಾತ್ರ ಉಪಯೋಗಿಸುತ್ತಾನೆ. ತಮ್ಮ ಸಾಮರ್ಥ್ಯದ ಶೇ 50 ರಷ್ಟನ್ನು ಅಥವಾ ಅದಕ್ಕೂ ಹೆಚ್ಚಿನದನ್ನು ಹಾಕಿದವನಿಗೆ ಇಡೀ ವಿಶ್ವವೇ ಸಲಾಮು ಹೊಡೆಯುತ್ತದೆ. ತಮ್ಮ ಇಡೀ ಸಾಮರ್ಥ್ಯವನ್ನು ಹಾಕುವ ಬೆರಳೆಣಿಕೆಯಷ್ಟು ಆತ್ಮಗಳನ್ನು ಕಂಡು ವಿಶ್ವವು ನಿಬ್ಬೆರಗಾಗಿ ನಿಲ್ಲುವುದು.'ಎಂದಿದ್ದಾನೆ ಆಂಡ್ರ್ಯೂ ಕಾರ್ನೆಗಿ. ಆತನ ಮಾತಿನಂತೆ ಶಕ್ತಿ ಸಾಮರ್ಥ್ಯಗಳನ್ನು ಪ್ರಯತ್ನದಲ್ಲಿ ಬಳಸಿದರೆ ಸುಂದರ ಬದುಕು ಘಮ ಘಮಿಸುವುದು ಖಂಡಿತ.

# ಕುಟುಂಬ ಪ್ರತಿ ವ್ಯಕ್ತಿಯ ಜೀವನದ ಅವಿಭಾಜ್ಯ ಅಂಗ :ಬಂಡೆ

ಉದಯರಶ್ಮಿ ನ್ಯೂಸ್



ವಿಜಯಪುರ: ಮನೆಯೇ ಮೊದಲ ಪಾಠ ಶಾಲೆ. ಕುಟುಂಬದಿಂದಲೇ ಒಬ್ಬ ವ್ಯಕ್ತಿಯು ಸಂಸ್ಕಾರ, ಪ್ರೀತಿ, ಹೊಂದಾಣಿಕೆಯನ್ನು ಕಲಿಯುತ್ತಾನೆ. ಕುಟುಂಬದ ಪ್ರೀತಿಯನ್ನು ಅರಿತು, ಇಡೀ ವಿಶ್ವವೇ ನಮ್ಮ ಕುಟುಂಬ ಎಂಬ ಭಾವನೆ ಎಲ್ಲರಲ್ಲಿ ಮೂಡಬೇಕು ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.

ಅವರು ತಾಲೂಕಿನ ನಾಗಠಾಣ ಗ್ರಾಮದಲ್ಲಿ ಬುಧವಾರ ಹಮ್ಮಿಕೊಂಡ ಅಂತಾರಾಷ್ಟ್ರೀಯ ಕುಟುಂಬ ದಿನವನ್ನು ಉದ್ದೇಶಿಸಿ ಮಾತನಾಡಿದರು.

ಕುಟುಂಬ ಪ್ರತಿಯೊಬ್ಬ ವ್ಯಕ್ತಿಯ ಜೀವನದ ಅವಿಭಾಜ್ಯ ಅಂಗವಾಗಿದ್ದು, ಜಗತ್ತು ಶಾಂತಿ, ಸಂಯಮದ ಹಾದಿಯಲ್ಲಿ ಸಾಗಲು ಕುಟುಂಬದ ತಳಪಾಯ ಅತಿ ಅಗತ್ಯ. ಎಲ್ಲರೂ ತಮ್ಮ ಕುಟುಂಬವನ್ನು ಪ್ರ□ತಿಸಬೇಕು. ನಮ್ಮ ಇಡೀ ಜೀವನವನ್ನು ನಿರ್ಮಿಸುವ ಅಡಿಪಾಯವೇ ಕುಟುಂಬವಾಗಿದೆ ಎಂದು ಹೇಳಿದರು.

ಸಿ ಆರ್ ಪಿ ಈರಣ್ಣ ಮಾತನಾಡಿ, ಮಾನವನ ಬೆಳವಣಿಗೆಗೆ ಕುಟುಂಬವು ಒಂದು ಅತ್ಯಂತ ಸಮರ್ಥವಾದ ತಳಹದಿಯಾಗಿದೆ. ಕುಟುಂಬವು ಮಕ್ಕಳ ಯೋಗಕ್ಷೇಮ, ಅಗತ್ಯಗಳನ್ನು ನೋಡಿಕೊಳ್ಳುತ್ತದೆ. ಮಗುವಿನಲ್ಲಿ ಸಾಮಾಜೀಕರಣ, ಭಾಷಾ ಬೆಳವಣಿಗೆ, ಭಾವನಾತ್ಮಕ ಕೌಶಲ್ಯಗಳನ್ನು ಅಭಿವೃದ್ಧಿಪಡಿಸುವುದು ಕುಟುಂಬದ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಬ್ಯಾಂಕ್ ಉದ್ಯೋಗಿ ಶ್ರೀಕಾಂತ ಮಾತನಾಡಿ, ಸಮಾಜ ವ್ಯವಸ್ಥೆಯ ಬಹುಮುಖ್ಯ ಅಂಗ ಕುಟುಂಬ. ಉತ್ತಮ ಕುಟುಂಬದಿಂದಲೇ ಅತ್ಯುತ್ತಮ ಸಮಾಜ ನಿರ್ಮಾಣ ಸಾಧ್ಯ. ಭಾರತೀಯ ಪರಂಪರೆಯಲ್ಲಿ ಕುಟುಂಬಕ್ಕೆ ಬಹುಮುಖ್ಯ ಸ್ಥಾನವಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕುಟುಂಬದ ಹಿರಿಯರಾದ ಸುಭಾಷ, ಭುವನೇಶ್ವರಿ ಅವರನ್ನು ಗೌರವಿಸಲಾಯಿತು.

ಶಂಕರ, ಸವಿತಾ, ಸುರೇಖಾ, ಸುಹಾಸಿನಿ, ಗಾಯತ್ರಿ, ದೊಂಡಾಬಯಿ, ಸುಜಾತಾ, ಮಕ್ಕಳಾದ ವರುಣ, ಪ್ರಫುಲ್, ಶ್ರೇಯಾ, ಸುಶಾಂತ್, ಆದೇಶ, ಆರುಷಿ, ಅನುಶ್ರೀ, ಶ್ರೀನಿಧಿ ಸೇ–ರಿದಂತೆ ಅನೇಕರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಆಡಳಿತದಲ್ಲಿ ಶೈಕ್ಷಣಿಕ ದುರಾಡಳಿತ :ಶಹಾಪೂರ

ಉದಯರಶ್ಮಿ ನ್ಯೂಸ್




ಬೆಂಗಳೂರು: ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ಆಡಳಿತಕ್ಕೆ ಬಂದು ಒಂದು ವರ್ಷ ಪೂರೈಸುತ್ತಿದೆ. ಈ ಸಂದರ್ಭದಲ್ಲಿ ಸರ್ಕಾರ ತನ್ನ ದುರಾಡಳಿತದ ಮೂಲಕ ಶಿಕ್ಷಣ ಕ್ಷೇತ್ರವನ್ನು ಹಾಳುಗಡವಿದೆ ಎಂದು ವಿಧಾನಪರಿಷತ್ ಮಾಜಿ ಸದಸ್ಯ ಅರುಣ್ ಶಹಾಪೂರ ಆಕ್ಷೇಪಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಲಾ ಶಿಕ್ಷಣ ವ್ಯವಸ್ಥೆಯಡಿ ರಾಜ್ಯ ಪಠ್ಯಕ್ರಮದಲ್ಲಿ 1 ಕೋಟಿಗೂ ಹೆಚ್ಚು ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ. 9 ಲಕ್ಷದಷ್ಟು ವಿದ್ಯಾರ್ಥಿಗಳು 10ನೇ ತರಗತಿ ಪರೀಕ್ಷೆ ಬರೆದಿದ್ದಾರೆ. ಕರ್ನಾಟಕ ಸರಕಾರ, ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರು ಈ ಇಲಾಖೆಯನ್ನು ನಿರ್ವಹಿಸುವಲ್ಲಿ ವಿಫಲವಾಗಿದ್ದಾರೆ. 1 ಕೋಟಿ ಮಕ್ಕಳ ಭವಿಷ್ಯವನ್ನು ಅತಂತ್ರಕ್ಕೆ ತಳ್ಳುವ ಕೆಲಸ ಮಾಡಿದ್ದಾರೆ ಎಂದು ದೂರಿದರು.

10ನೇ ತರಗತಿ ಪರೀಕ್ಷೆ ಬರೆದ 9 ಲಕ್ಷದಷ್ಟು ವಿದ್ಯಾರ್ಥಿಗಳು ಮತ್ತು ಪಾಲಕರು ಆತಂಕದಲ್ಲಿದ್ದಾರೆ. ಕೆಎ□□□ಇಎಪಿ ಮೂಲಕ ಪರೀಕ್ಷೆ ನಡೆಸಿದ್ದಾರೆ. ಯಶಸ್ವಿ ಪರೀಕ್ಷೆ ನಡೆಸಿದ್ದಾಗಿ ಹೇಳಿದ್ದಾರೆ. ಸ್ವಾತಂತ್ರ್ಯ ಬಂದ ಬಳಿಕ ಅತ್ಯಂತ ಕೆಟ್ಟ ಪರೀಕ್ಷೆ ನಡೆದಿದ್ದರೆ ಅದು ಮಧು ಬಂಗಾರಪ್ಪ ಅವರ ನೇತೃತ್ವದ ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ಎಂದು ಅವರು ವಿಷಾದದಿಂದ ತಿಳಿಸಿದ ಅವರು, ದಿಕ್ಕು ದೆಸೆಯಿಲ್ಲದ ಶಿಕ್ಷಣವನ್ನು ನಿರ್ಮಿಸಿದ್ದಾರೆ ಎಂದು ಶಹಾಪೂರ ಟೀಕಿಸಿದರು.

# ಮತಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಯೇ ನನ್ನ ಗುರಿ :ಮನಗೂಳಿ

ಉದಯರಶ್ಮಿ ನ್ಯೂಸ್



ಸಿಂದಗಿ: ಮುಂಬರುವ ದಿನಮಾನಗಳಲ್ಲಿ ಸಿಂದಗಿ ಮತಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಮಾಡುವ ಕನಸನ್ನು ಹೊಂದಿದ್ದೇನೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ತಾಲೂಕಿನ ಗೋಲಗೇರಿ ಗ್ರಾಮದಲ್ಲಿ ಗೋಲಗೇರಿ ಹಾಗೂ ಸಾಸಾಬಾಲ ಕಾಂಗ್ರೆಸ್ ಕಾರ್ಯಕರ್ತರು ಮತ್ತು ಅಭಿಮಾನಿಗಳು ಹಮ್ಮಿಕೊಂಡ ವಿಜಯೋತ್ಸವದಲ್ಲಿ ಮಾತನಾಡಿದ ಅವರು, ಮತಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಯೇ ನನ್ನ ಗುರಿ. ಅದನ್ನು ಈಡೇರಿಸಿಯೇ ತಿರುತ್ತೇನೆ ಎಂದರು.

ಇದೇ ಸಂದರ್ಭದಲ್ಲಿ ವಿಜಯಪುರ ಜಿಲ್ಲಾ ಕಾಂಗ್ರೆಸ್ ಕಾರ್ಯದರ್ಶಿ ಬಸವರಾಜ ಮಾರಲಭಾವಿ, ದಾನಪ್ಪಗೌಡ ಚನಗೊಂಡ, ಸಿಂದಗಿ ಭೂನ್ಯಾಯ ಮಂಡಳಿ ಸದಸ್ಯ ಮುದಿಗೌಡ ಬಿರಾದಾರ, ಕಾಂಗ್ರೆಸ್ ಪಕ್ಷದ ಮುಖಂಡ ಮಡಿವಾಳ ನಾಯ್ಕೋಡಿ, ಮಂಜುನಾಥ ಯಂಕಂಚಿ, ನೀಲಕಂಠ ಚಲವಾದಿ, ನಬೀಸಾಬ ಕೋರಬು, ಬಾಬು ಜಾಲವಾದಿ, ಖಾದರ್ ಹಳಿಮನಿ, ಲಕ್ಷ್ಮಣ ಕಲಾಲ, ರಾಜು ಹೊಳಕುಂದಿ, ಸಿದ್ದಣ್ಣ ಬಿರಾದಾರ, ಧರ್ಮರಾಠೋಡ ಸೇರಿದಂತೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಮತ್ತು ಅಭಿಮಾನಿಗಳು ಉಪಸ್ಥಿತಿ–ರಿದ್ದರು.

## ದಾವಣಗೆರೆಯಲ್ಲಿ ಪುಟ್ಟರಾಜ ಗುರು ಅಭಿಮಾನಿ ಭಕ್ತರ ಸಮಾವೇಶದ ಸಮಾರೋಪ

# ಗುರು ಪುಟ್ಟರಾಜರದು ಸಾವಿರದ ಸಾಹಿತ್ಯ :ಚನ್ನವೀರಸ್ವಾಮಿ

ಉದಯರಶ್ಮಿ ನ್ಯೂಸ್



ದಾವಣಗೆರೆ: ಗುರು ಪುಟ್ಟರಾಜರು ರಚಿಸಿದ ಸಾಹಿತ್ಯ ಅದು ಲಿಂಗ ಮೆಚ್ಚಿದ ಸಾಹಿತ್ಯ. ಅದು ಸಾವಿರದ ಸಾಹಿತ್ಯ. ಸಾವಿರದ ಸಾಹಿತ್ಯ ಸಾವಿರ ಸಾವಿರ ಮನೆಗಳಿಗೆ ತಲುಪಿಸುವ ಅಭಿಯಾನ ಯಶಸ್ವಿಯಾಗಿದ್ದು ಇದಕ್ಕೆ ಕಾರಣೀಭೂತರಾದ ಸದಸ್ಯರಿಗೆ ಅಭಿನಂದಿಸುತ್ತೇನೆ. ಗುರು ಸಾಹಿತ್ಯ ಪ್ರಚಾರ ಸೇವೆ ಮುಂದುವರಿಸಿಕೊಂಡು ಹೋಗಲು ಬಯಸಿದ್ದು, ಇದಕ್ಕೆ ತಮ್ಮೆಲ್ಲರ ತನು ಮನ ಧನದ ಸಹಕಾರ ಇರಲಿ ಎಂದು ವಿನಂತಿಸಿಕೊಳ್ಳುತ್ತೇನೆ ಎಂದು ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಸಂಸ್ಥಾಪಕ ವೇ. ಚನ್ನವೀರಸ್ವಾಮಿ ಹಿರೇಮಠ ಹೇಳಿದರು.

ಅವರು ನಗರದ ಕುವೆಂಪು ಕನ್ನಡ ಭವನದಲ್ಲಿ, ಗದುಗಿನ ಡಾ. ಪಂಡಿತ ಪುಟ್ಟರಾಜ ಸೇವಾ ಸಮಿತಿಯು ಹಮ್ಮಿಕ್ಕೊಂಡಿದ್ದ, ಪುಟ್ಟರಾಜ ಗುರುವರ್ಯರ ಅಭಿಮಾನಿ ಭಕ್ತರ ಸಮಾವೇಶದ ಸಂಜೆ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿಕೊಂಡು ಮಾತನಾಡಿದರು. ಸಮಾರೋಪ ಸಮಾರಂಭದಲ್ಲಿ ಕದಳಿ ವೇದಿಕೆ ರಾಜ್ಯ ಉಪ ಸಂಚಾಲಕರಾದ ಶ್ರೀಮತಿ ಪ್ರಮಿಳಾ ನಟರಾಜ ದಾವಣಗೆರೆ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಪೂಜ್ಯಗುರು ಪುಟ್ಟರಾಜರ ಒಡನಾಟ ಅವರ ಲಿಂಗಪೂಜಾ ವೈಭವ ಕುರಿತು ಮಾತನಾಡುತ್ತಾ ಭಾವುಕರಾದರು.

ಇದೇ ಸಂದರ್ಭದಲ್ಲಿ ಸೇವಾ ಸಮಿತಿಗೆ ಚತುರ್ಮುಖ ಸೇವೆ ಸಲ್ಲಿಸಿದ ರೇವಣಸಿದ್ಧಪ್ಪ ಎಂ. ಕೆ. ದಾವಣಗೆರೆ, ಶಿವರಾಜ ಹ. ಉಜ್ಜನಿ ಹಾವೇರಿ, ಡಾ. ಗೀತಾ ಸುತ್ತಕೋಟಿ, ಹಾವೇರಿ, ಸೌಮ್ಯ ಸತೀಶ್ ಧಾರವಾಡ, ದಾವಣಗೆರೆ, ಬಸವರಾಜ ಹಡಪದ ಹಳಿಯಾಳ, ಸರೋಜಿನಿ ಕಾ ಮಾವಿನಮರ ಇಂಡಿ, ಇವರುಗಳಿಗೆ ಗುರು ಸೇವಾ ರತ್ನ ರಾಷ್ಟ್ರೀಯ ಪ್ರಶಸ್ತಿ ಮತ್ತು ಸಾವಿರದ ಸಾಹಿತ್ಯ ಸಾವಿರ ಸಾವಿರ ಮನೆ ಮನಗಳಿಗೆ ಅಭಿಯಾನದಲ್ಲಿ ಅನುಪಮ ಸೇವೆ ಸಲ್ಲಿಸಿದ ಬಸವರಾಜೇಶ್ವರಿ ಶಿರೂರ ಗಾಜರಕೋಟ ಗುರುಮಠಕಲ್, ಪ್ರಶಾಂತ ಸೊಕ್ಕೆ ಜಗಳೂರು ದಾವಣಗೆರೆ, ಅಕ್ಕಮಹಾದೇವಿ ಟಿ. ನೀರಲಗಿ ಹಾವೇರಿ ಇವರುಗಳಿಗೆ ಸಾಹಿತ್ಯ ಸೇವಾ ಶ್ರೀ ರಾಜ್ಯ ಪ್ರಶಸ್ತಿಗಳನ್ನು, ಸಂಸ್ಕೃತಿ ಚಿಂತಕರು, ಸಮಾಜ ಸೇವಕಿಯರಾದ ಗಾಯತ್ರಿ ಸಿದ್ದೇಶ್ವರ ದಾವಣಗೆರೆ ಇವರು ಪ್ರದಾನಮಾಡಿ ಸೇವಾ ಸಮಿತಿಯ ಸೇವೆಯನ್ನು ಶ್ಲಾಘಿಸಿದರು.

ರೇವಣಸಿದ್ದಯ್ಯ ಹಿರೇಮಠ, ಶಿವಬಸಯ್ಯ ಚರಂತಿಮಠ, ರೇವಣಸಿದ್ಧಪ್ಪ ಎಂ. ಕೆ. ಸೇವಾ ಸಮಿತಿಯ ಜಿಲ್ಲಾ ಅಧ್ಯಕ್ಷ ವಿನಾಯಕ ಪಿ. ಬಿ. ವೇದಿಕೆಯಲ್ಲಿದ್ದರು.

ಸಮಾರೋಪ ಸಮಾರಂಭದ ನಂತರ ಪಂ. ರೇವಣಸಿದ್ಧಯ್ಯ ಹಿರೇಮಠ ಕಲಬುರ್ಗಿ, ಪಂ. ಶಿವಬಸಯ್ಯ ಚರಂತಿಮಠ ದಾವಣಗೆರೆ, ಡಾ. ಸುಮಾ ಹಡಪದ ಹಳಿಯಾಳ, ರೇವಣಸಿದ್ಧಪ್ಪ ಎಂ. ಕೆ. ಶಿಷ್ಯವೃಂದ ದಾವಣಗೆರೆ, ಸೌಮ್ಯ ಸ. ದಾರವಾಡ ಮತ್ತು ತಂಡ ಇವರಿಂದ ವಚನ ಸಂಗೀತ, ಪುಷ್ಪ ಗೋವಿಂದರಾಜು ತಂಡ ದಾವಣಗೆರೆ, ರೇಖಾ ಮತ್ತು ತಂಡ, ಮಮತಾ ಕೊಟ್ರೇಶ, ಮಮತಾ ಮಾಗಳ ಮತ್ತ ತಂಡ ಹಾವೇರಿ, ಮಂಗಳ ಗೌರಿ ತಂಡ ದಾವಣಗೆರೆ ತಂಡ ಭಕ್ತಿಗೀತೆ ಗಾಯನ, ಪಂ. ಶರಣ ಎಸ್. ಬಿ. ಶಿಷ್ಯವೃಂದ ಸಂತೆಬೆನ್ನೂರು, ಡಾ. ಮಂಗಳಾ ಶೇಖರ್ ಶಿಷ್ಯವೃಂದ ದಾವಣಗೆರೆ, ಭರತನಾಟ್ಯ, ಮಮತಾ ನಾಗರಾಜ ಮತ್ತು ತಂಡ ದಾವಣಗೆರೆ ಕಿರು ನಾಟಕ, ಈ ಎಲ್ಲಾ ಕಾರ್ಯಕ್ರಮಗಳು ಸಭಿಕರನ್ನು ಮಂತ್ರಮುಗ್ದರನ್ನಾಗಿ ಮಾಡಿದವು.

ನಂದಿನಿ ಗಂಗಾಧರ ಸ್ವಾಗತಿಸಿದರು, ಚಂದ್ರಿಕಾ ಮಂಜುನಾಥ ನಿರೂಪಣೆ ಮಾಡಿದರು, ಪುಷ್ಪಾ ವಂದನಾರ್ಪಣೆ ಮಾಡಿದರು.

ಬೆಳಿಗ್ಗೆ ನಡೆದ ಉದ್ಘಾಟನಾ ಸಮಾರಂಭವನ್ನು ಸಮಿತಿಯ ಮಹಾ ಪೋಷಕ ಜಿಲ್ಲಾ ಅಧ್ಯಕ್ಷ ವಿನಾಯಕ ಪಿ. ಬಿ. ದಾವಣಗೆರೆ ಇವರು ಉದ್ಘಾಟನೆ ಮಾಡಿದರು. ಗೌರವಾಧ್ಯಕ್ಷ ಅಣಬೇರು ಮಂಜಣ್ಣ ಅಧ್ಯಕ್ಷತೆ ವಹಿಸಿಕೊಂಡಿದ್ದರು. ಬಾಪೂಜಿ ಶಿಕ್ಷಣ ಸಂಸ್ಥೆಯ ನಿರ್ದೇಶಕಿ ಕಿರುವಾಡಿ ಗಿರಿಜಮ್ಮ, ದಾವಣಗೆರೆ ವೀರೇಶ್ವರ ಪುಣ್ಯಾಶ್ರಮದ ಕರಿಬಸಪ್ಪ ಜಾಲಿಮರ, ಕ.ಸಾ.ಪ.ದಾವಣಗೆರೆ ಜಿಲ್ಲಾ ಅಧ್ಯಕ್ಷ ಬಿ. ವಾಮದೇವಪ್ಪ ಶ.ಸಾ.ಪ.ದಾವಣಗೆರೆ ಜಿಲ್ಲಾ ಅಧ್ಯಕ್ಷ ಬಿ. ಕೆ ಪರಮೇಶ್ವರಪ್ಪ ದಾವಣಗೆರೆ ಅತಿಥಿಗಳಾಗಿ ಆಗಮಿಸಿದ್ದರು. ಉದ್ಘಾಟನಾ ಸಮಾರಂಭದ ನಂತರ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಕವಿಗಳಿಂದ ಕಲೆಗೆ ಕಣ್ಣಿತ್ತ ಪೂಜ್ಯರು ರಾಜ್ಯಮಟ್ಟದ ಕವಿಗೋಷ್ಠಿ ನಡೆಯಿತು. ಕವಿಗೋಷ್ಠಿ ಅಧ್ಯಕತೆಯನ್ನು ಶ್ರೀ ಎಂ. ಪಿ. ಎಂ. ಕೊಟ್ರಯ್ಯ ನಿವೃತ್ತ ಕನ್ನಡ ಪ್ರಾಧ್ಯಾಪಕರು ಹೂವಿನಹಡಗಲಿ ಇವರು ವಹಿಸಿಕೊಂಡಿದ್ದರು ವೇ. ಚನ್ನವೀರಸ್ವಾಮಿ ಹಿರೇಮಠ (ಕಡಣಿ) ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಾರ್ಥನೆಯನ್ನು ಶ್ರೀ ವೀರೇಶ್ವರ ಪುಣ್ಯಾಶ್ರಮದ ವಿದ್ಯಾರ್ಥಿಗಳು ನಡೆಸಿಕೊಟ್ಟರು. ಹಾಲೇಶ ಜಿ. ಇ. ಸ್ವಾಗತ ಮಾಡುವರು. ಮಮತಾ ನಾಗರಾಜ ಪ್ರ.ಕಾರ್ಯದರ್ಶಿ: ಡಾ. ಪಂ. ಪು. ಸೇ.ಸಮಿತಿ ಮಹಿಳಾ ಘಟಕ, ದಾವಣಗೆರೆ ನಿರೂಪಿಸಿದರು. ಕವಿಗೋಷ್ಠಿ ನಿರೂಪಣೆ: ಶ್ರೀಮತಿ ವಾಣಿ ಬಸವರಾಜ ದಾವಣಗೆರೆ ನಡೆಸಿಕೊಟ್ಟರು.

# ಪಡಗಾನೂರಿನ 'ನಮ್ಮ ಮಕ್ಕಳ ಧಾಮ' ನವೀಕರಿಸಲು ಆಗ್ರಹ

ಉದಯರಶ್ಮಿ ನ್ಯೂಸ್

ವಿಜಯಪುರ: ಪಡಗಾನೂ–ರಿನ ನಮ್ಮ ಮಕ್ಕಳ ಧಾಮವನ್ನು ಬಾಲ ನ್ಯಾಯ ಕಾಯಿದೆ ಅಡಿಯಲ್ಲಿ ನೋಂದಣಿ ನವೀಕ–ರಿಸಲು ಸಾರ್ವಜನಿಕರ ಪರವಾಗಿ ವಿಜಯಪುರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಮುಖಂಡರು ಮಾತನಾಡಿ, ದೇವರ ಹಿಪ್ಪರಗಿ ತಾಲೂಕಿನ ಪಡಗಾನೂರ ಗ್ರಾಮದ ಹದ್ದಿಯಲ್ಲಿ ಬರುವ ಉಜ್ವಲ ಗ್ರಾಮೀಣ ಅಭಿವೃದ್ಧಿ ಸೇವಾ ಸಂಸ್ಥೆ ಅಡಿಯಲ್ಲಿ ನಮ್ಮ ಮಕ್ಕಳ ಧಾಮ ಎಂಬ ಹೆಸರಿನ ಮಕ್ಕಳ ಮನರ್ವಸತಿ ಕೇಂದ್ರವನ್ನು 16 ವರ್ಷಗಳಿಂದ ನಡೆಸಲಾಗುತ್ತಿದೆ. ಈ ಧಾಮವು ಸರ್ಕಾರದ ಯಾವುದೇ ಅನುದಾನ ಪಡೆಯದೇ ಸಮುದಾಯದ ನಾಯಕತ್ವದಲ್ಲಿ ನಮ್ಮಂತಹ ಮಹಾ ದಾನಿಗಳ ಮೂಲಕವೇ ನಡೆಯುತ್ತಿದೆ. ನಾವು ಕಂಡಿರುವಂತೆ ಸದರಿ ಧಾಮವು ಮಕ್ಕಳ ಸ್ನೇಹಿ ವಾತಾವರಣ ಹೊಂದಿದ್ದು, ಮಕ್ಕಳಿಗೆ ಬೇಕಾದ ಎಲ್ಲಾ ಮೂಲಭೂತ ಸೌಕರ್ಯಗಳು ಲಭ್ಯ ಇವೆ.

ಸಧ್ಯ ನಮ್ಮ ಮಕ್ಕಳ ಧಾಮದ ನೋಂದಣಿ ನವೀಕ–ರಿಸಬೇಕಾಗಿದ್ದು , ಇದಕ್ಕೆ ಸಂಬಂಧಿಸಿದಂತೆ ಸಂಸ್ಥೆಯವರು ದಿನಾಂಕ : 27/03/2024 ಮತ್ತು 18/04/2024 ರಂದು ಎರಡು ಬಾರಿ ತಮಗೆ ಪತ್ರ ನೀಡಿದರೂ ಸಹ ಇಲ್ಲಿಯವರೆಗೂ ಯಾವುದೇ ಪ್ರಯೋಜನವಾಗಿಲ್ಲ. ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳ ನಿರ್ಲಕ್ಷತನ, ನಿಷ್ಕಾಳಜಿತನ ಹಾಗೂ




ಇಚ್ಛಾಶಕ್ತಿಯ ಕೊರತೆ ಎದ್ದು ಕಾಣುತ್ತಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ.

ಸದ್ಯ ನಮ್ಮ ಮಕ್ಕಳ ಧಾಮದ ನೋಂದಣಿ ರದ್ದು ಮಾಡುವುದಾಗಿ ವದಂತಿಗಳು ಹರಡುತ್ತಿವೆ. ಇದಕ್ಕೆ ತಾವು ಆಸ್ಪದ ನೀಡಬಾರದು. ಅನಾಥ ಮತ್ತು ಅಪಾಯದ ಅಂಚಿನಲ್ಲಿರುವ ಮಕ್ಕಳ ಆಶ್ರಯ ತಾಣವಾಗಿರುವ ನಮ್ಮ ಮಕ್ಕಳ ಧಾಮದ ನೋಂದಣಿ ಒಂದು ವೇಳೆ ರದ್ದಾದರೆ , ಮಕ್ಕಳ ಕ್ಷೇತ್ರದಲ್ಲಿ ಅಪಾರ ಕೆಲಸ ಮಾಡಿ, ಅನುಭವ ಹೊಂದಿದ ಸಂಸ್ಥೆಯನ್ನು ನಮ್ಮ ಕೈಯಾರೆ ಕೊಲೆ ಮಾಡಿದಂತಾಗುತ್ತದೆ. ಹಾಗೂ ಮಕ್ಕಳಿಗೆ ದೊರೆಯಬೇಕಾದ ಹಕ್ಕುಗಳಿಂದ ವಂಚಿತರನ್ನಾಗಿ ಮಾಡಿದಂತಾಗುತ್ತದೆ.

ಜಿಲ್ಲಾ ತನಿಖಾ ತಂಡವು ನಮ್ಮ ಮಕ್ಕಳ ಧಾಮಕ್ಕೆ ಭೇಟಿ ನೀಡಿದಾಗ, ತಂಡದ ಎಲ್ಲಾ ಸದಸ್ಯರು ಸಕಾರಾತ್ಮಕ ವರದಿ ನೀಡಿದ್ದಾರೆ. ಅದರಲ್ಲಿನ ಪೀಟರ್ ಅಲೆಗ್ಝಾಂಡರ್ ಎಂಬುವವರು ಮಾತ್ರ ಪೂರ್ವಾಗ್ರಹ ಪೀಡಿತರಾಗಿ ಕೇವಲ ಸಣ್ಣಪುಟ್ಟ ನಕಾರಾತ್ಮಕ ಅಂಶಗಳನ್ನೇ ವರದಿ ಮಾಡುತ್ತಿದ್ದಾರೆ. ಸರ್ಕಾರದಿಂದ ಧನ ಸಹಾಯ ಪಡೆದುಕೊಂಡು ನಡೆಯುತ್ತಿರುವ ಹೆಚ್ಚಿನ ಹಾಸ್ಟೆಲ್‌ಗಳಲ್ಲಿ ಸೌಲಭ್ಯಗಳ ಕೊರತೆ ಇರುವುದು ನಾವು ದಿನಾಲೂ ದಿನಪತ್ರಿಕೆಗಳಲ್ಲಿ ಓದುತ್ತಿದ್ದೇವೆ ಹಾಗೂ ಕಣ್ಣಾರೆ ಕಂಡಿದ್ದೇವೆ. ಅಂತಹದರಲ್ಲಿ ಯಾವ ಕುಂದುಕೊರತೆಗಳು ಇಲ್ಲದಂತೆ ನಮ್ಮಂತಹ ದಾನಿಗಳ ಮೂಲಕವೇ ಮುನ್ನಡೆಸುತ್ತಿರುವ ಹಾಗೂ ಬೆರಳೆಣಿಕಷ್ಟೆ ನೋಡಲು ಸಿಗುವ ಇಂತಹ ಪ್ರಾಮಾಣಿಕ ಮತ್ತು ಪಾರದರ್ಶಕ ಕೇಂದ್ರಕ್ಕೆ ಮೇಲಿಂದ ಮೇಲೆ ಸಮಸ್ಯೆ ಒಡ್ಡುತ್ತಿರುವುದು ಗುಬ್ಬಿಯ ಮೇಲೆ ಬ್ರಹ್ಮಾಸ್ತ್ರ ಮಾಡಿದಂತೆ ಅಲ್ಲವೆ ?.

ಕಾರಣ ಜಿಲ್ಲೆಯ ದಂಡಾಧಿಕಾರಿಗಳಾದ ತಾವು ಸ್ವತಃ ಒಮ್ಮೆ ಸದರಿ ಕೇಂದ್ರಕ್ಕೆ ಭೇಟಿ ನೀಡಿ ಪರಶೀಲಿಸಿರಿ, ಭೇಟಿಯ ಸಂದರ್ಭದಲ್ಲಿ ನ್ಯೂನ್ಯತೆಗಳು ಕಂಡು ಬಂದಲ್ಲಿ ತಮ್ಮ ಮಾರ್ಗದರ್ಶನದಂತೆ ಸರಿಪಡಿಸಿಕೊಂಡು ಮುಂದುವರೆಯುತ್ತೇವೆ. ಆದ್ದರಿಂದ ನೋಂದಣಿ ನವೀಕರಣಕ್ಕೆ ಕ್ರಮ ವಹಿಸಬೇಕೆಂದು ಕೇಳಿಕೊಳ್ಳುತ್ತೇವೆ. ಒಂದು ವೇಳೆ ನವೀಕರಣಕ್ಕೆ ಕ್ರಮ ವಹಿಸದಿದ್ದರೆ ಉಗ್ರ ಹೋರಾಟ ಮಾಡಲಾಗುವುದೆಂದು ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕಾಶಿಪತಿ ಕುದರಿ, ಹೀರಾಚಂದ ಎಸ್. ಗಾಂಧಿ, ಆನಂದ ಕುಲಕರ್ಣಿ, ಶ್ರೀಶೈಲ ಮುಳಜಿ, ಶ್ರೀಇಕಾಂತ ಬ. ರಡ್ಡಿ, ಚನ್ನಬಸಪ್ಪ ಜೋಗೂರ, ಸುನೀಲ ಲ. ಚಾಕರೆ, ಬಸವರಾಜ ಶಿ. ಗಿಡ್ನವರ, ಶಶಿಕಲಾ ಎ. ಜಾಬೇನವರ, ಅಪ್ಪು ಸಿದ್ದಪ್ಪ ದೊಡ್ಡಮನಿ, ಕಲ್ಲಪ್ಪ ಶಿವಾನಂದ ನಂದರಗಿ, ಸಂಜು ಯ. ಇರಕಲ್, ಬಸವರಾಜ ತಾಳಿಕೋಟಿ, ನವೀನ ಶಿ. ಮಲಘಾಣದಿನಿ, ಇನ್ನಿತರರು ಇದ್ದರು.

# ಕಬ್ಬಿನ ಬಿಲ್ ಪಾವತಿಸುವಂತೆ ತಹಸೀಲ್ದಾರರಿಗೆ ರೈತರಿಂದ ಮನವಿ

ಉದಯರಶ್ಮಿ ನ್ಯೂಸ್



ತಿಕೋಟಾ: ತಾಲೂಕಿನ ರೈತರು ಸಂಕಷ್ಟದಲ್ಲಿದ್ದು ಕಬ್ಬಿನ ಬಿಲ್ ಪಾವತಿಸುವಂತೆ ತಹಸೀಲ್ದಾರ ಸುರೇಶ ಮುಂಜೆ ಅವರಿಗೆ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಮನವಿ ಸಲ್ಲಿಸಿದರು.

ತಿಕೋಟಾ ತಾಲೂಕಾ ಅಧ್ಯಕ್ಷ ಸಾತಲಿಂಗಯ್ಯಾ ಸಾಲಿಮಠ ಮಾತನಾಡಿ, ಕಬ್ಬು ಬೆಳೆಗಾರರು ಸಂಕಷ್ಟದಲ್ಲಿದ್ದು ಕಳೆದ ಆರು ತಿಂಗಳುಗಳಿಂದ ಕಾರ್ಖಾನೆ ಮಾಲಿಕರು ಹಣ ಪಾವತಿಸದೆ ಸತಾಯಿಸುತ್ತಿದ್ದು ಇದರಿಂದ ರೈತರಿಗೆ ಹಣ ಬಾರದೇ ಹಲವಾರು ಸಮಸ್ಯೆಗಳನ್ನು ಎದುರಿಸುವಂತಾಗಿದೆ. ಜಮಖಂಡಿ ಶುಗರ್ಸ್, ಸಾಯಿಪ್ರೀಯಾ ಶುಗರ್ಸ್ ಅಲಬಾಳ, ಬಸವೇಶ್ವರ ಶುಗರ್ಸ್ ಕಾರಜೋಳ ಇನ್ನು ಹಲವು ಸಕ್ಕರೆ ಕಾರ್ಖಾನೆ ಮಾಲಿಕರು ಕಬ್ಬಿನ ಬಿಲ್ಲು ರೈತ–ರಿಗೆ ಪಾವತಿಸಬೇಕಿದೆ, ಆದಷ್ಟು ಬೇಗನೆ ಬಿಲ್ ಪಾವತಿಸದಿದ್ದಲ್ಲಿ ಹೋರಾಟ, ರಸ್ತಾರೋಕೊ ಅನಿವಾರ್ಯವಾಗುತ್ತದೆ, ಇದಕ್ಕೆ ಆಸ್ಪದ ಕೊಡದೆ ರೈತರಿಗೆ ಅನುಕೂಲ ಮಾಡಿಕೊಡಬೇಕೆಂದು ತಹಸೀಲ್ದಾರ ಅವರಿಗೆ ಮನವಿ ಮಾಡಲಾಯಿತು.

ತಿಕೋಟಾ ತಹಸೀಲ್ದಾರ ಸುರೇಶ ಮುಂಜೆ ಪೋನ ಮುಖಾಂತರ ಕೃಷಿ ಅಧಿಕಾ–ರಿಗಳಾದ ಎಸ ಜಿ ಹಿರೇಂಟ ಜಮಖಂಡಿ ಶುಗರ್ಸ ಇವರ ಜೊತೆ ಮಾತನಾಡಿ, ಆದ–'ಷ್ಟು ಬೇಗನೆ ಕಬ್ಬಿನ ಬಿಲ್ಲು ಪಾವತಿಸುವುದಾಗಿ ಭರವಸೆ ನೀಡಿದ್ದಾರೆಂದು ಹೇಳಿದರು.

ಇದೆ ವೇಳೆ ರೈತ ಮುಖಂಡರಾದ ಹೊನವಾಡ ಅಧ್ಯಕ್ಷ ಹನಮಂತ ಬ್ಯಾಡಗಿ, ಜಿಲ್ಲಾ ಸಂಚಾಲಕ ನಜೀರ ನಂದರಗಿ, ಕಲ್ಲಪ್ಪ ಮುಂಜಾನ, ಧರೆಪ್ಪ ಸೋರಡಿ, ಖಾದರ ವಾಲೀಕಾರ, ಎಸ ಎಸ ಎಚ್ಚಿ, ತಿಕೋಟಾ ಉಪಾಧ್ಯಕ್ಷ ಶಾನೂರ ನಂದರಗಿ ಸೇರಿದಂತೆ ಇತರರು ಇದ್ದರು.

# ಪ್ರಜ್ವಲ್ ರೇವಣ್ಣಗೆ ಬಂಧಿಸಲು ಕೆಪಿಸಿಸಿ ಮಹಿಳಾ ಸಮಿತಿ ಆಗ್ರಹ

ಉದಯರಶ್ಮಿ ನ್ಯೂಸ್




ವಿಜಯಪುರ: ಕೆಪಿಸಿಸಿ ಮಹಿಳಾ ಕಾಂಗ್ರೆಸ್ ಸಮಿತಿಯ ರಾಜ್ಯ ಪ್ರಧಾನ ಕಾರ್ಯದರ್ಶಿ ವಿದ್ಯಾವತಿ ಅಂಕಲಗಿ ಇವರ ನೇತೃತ್ವದಲ್ಲಿ ಹಾಸನದ ಸಂಸದ ಪ್ರಜ್ವಲ್ ರೇವಣ್ಣ ನವರ ಪ್ರಕರಣವನ್ನು ರಾಜ್ಯ ಸರಕಾರವು ಎಸ್.ಐ.ಟಿ. ಗೆ ವಹಿಸಿದ್ದನ್ನು ಸಮರ್ಥಿಸಿಕೊಂಡು ವಿಜಯಪುರ ಜಿಲ್ಲಾಧಿಕಾರಿಗಳ ಮುಖಾಂತರ ಮುಖ್ಯಮಂತ್ರಿ ಸಿದ್ದರಾಮಯ್ಯರವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅವರು ಮಾತನಾಡಿ ಪ್ರಜ್ವಲ್ ರೇವಣ್ಣ ನವರ ಪ್ರಕರಣವನ್ನು ರಾಜ್ಯ ಸರಕಾರವು ಎಸ್.ಐ.ಟಿ. ಗೆ ವಹಿಸಿದ್ದು ನಮಗೆ ತೃಪ್ತಿ ಇದೆ. ಕರ್ನಾಟಕದ ಎಸ್.ಐ.ಟಿ. ಬಗ್ಗೆ ಭರವಸೆ ಇದ್ದು, ಕರ್ನಾಟಕದ ಪೊಲೀಸರು ದಕ್ಷರಿದ್ದು, ಈಗಾಗಲೇ ಛಾಪಾ ಕಾಗದ ಪ್ರಕರಣದಲ್ಲಿ ಹಾಗೂ ತೀರಾ ಇತ್ತೀಚಿನ ರಾಮೇಶ್ವರ ಕೆಫೆ ಬ್ಲಾಸ್ಟ್ ಪ್ರಕರಣವನ್ನು ಭೇದಿಸಿದ ಪ್ರಕರಣದಲ್ಲಿ ಇದನ್ನು ಸಾಬೀತು ಮಾಡಿದ್ದಾರೆ ಎಂದು ಹೇಳಿದರು. ಅಲ್ಲದೆ ಸಂಸದ ಪ್ರಜ್ವಲ್ ರೇವಣ್ಣ ನವರನ್ನು ಎಲ್ಲಿದ್ದರೂ ಕರೆತಂದು ಬಂಧಿಸಲು ಕೇಂದ್ರ ಸರಕಾರದವರು ಸೂಕ್ತ ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ನಾಗಠಾಣ ಶಾಸಕ ವಿಠ್ಠಲ ಕಟಕಧೋಂಡ ಮಾತನಾಡಿ, ಪ್ರಜ್ವಲ್ ರೇವಣ್ಣ ನವರ ಪ್ರಕರಣದಲ್ಲಿ ಪ್ರಮುಖ ಸಾಕ್ಷಿಗಳಿಗೆ ಸೂಕ್ತ ರಕ್ಷಣೆಗಾಗಿ ವಿಶೇಷ ವ್ಯವಸ್ಥೆ ಹಾಗೂ ತುರ್ತಾಗಿ ಭರವಸೆಯ ಅವಶ್ಯಕತೆ ಇದೆ. ಸದರಿ ಪ್ರಕರಣವು ಒಂದು ಗಂಭೀರ ಸ್ವರೂಪದ್ದಾಗಿದ್ದು, ನಾಡಿನ ಜನತೆ ತಲೆತಗ್ಗಿಸುವಂತಹ ಹಾಗೂ ನಾಚಿಕೆಗೇಡಿನ ವಿಷಯವಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಹಾದೇವಿ ಗೋಕಾಕ, ಭಾರತಿ ಹೊಸಮನಿ, ಮಂಜುಳಾ ಗಾಯಕವಾಡ, ಆಸ್ಮಾ ಕಾಲೇಬಾಗ, ಹಮೀದಾ ಪಟೇಲ, ಮುಸ್ಕಾನ ಶಿವಣಗಿ, ಅಂಬಿಕಾ ಪಾಟೀಲ, ಶರಣಮ್ಮಾ ನಾಯಕ, ಜ್ಯೋತಿ ಗುಡಿಮನಿ, ಲಲಿತಾ ನಾಯಕ, ಭಾಗೀರಥಿ ನಾಗರಹಳ್ಳಿ, ಕಾಶಿಬಾಯಿ ಹಡಪದ, ಗಂಗವ್ವ ಕಣಮುಚನಾಳ, ಸುಮಿತ್ರಾ ಹನೂರ, ಶಶಿಕಲಾ ಮಣೂರ, ಶಾರದಾ ಬೆಟಗೇರಿ, ಅಶ್ವಿನಿ ಪಾತ್ರೋಟಿ, ಶಮೀಮಾ ಅಕ್ಕಲಕೋಟ, ಸಂಜನಾ ಬಜಂತ್ರಿ ಮುಂತಾದವರು ಉಪಸ್ಥಿತ–ರಿದ್ದರು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR